

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 234 | ₹ ಬೆಲೆ: 4 | Thursday, 09, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಕಾಡಾನೆ ದಾಳಿಗೆ ಬಲಿಯಾದ ಶ್ರಮಿಕ ಮಹಿಳೆ ಕುಟುಂಬಕ್ಕೆ 15 ಲಕ್ಷ ಪರಿಹಾರ ಘೋಷಿಸಿದ ಸಿಎಂ



ಮೂಡಿಗೆರೆ: ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಯ ಹೆಡದಾಳು ಬಳಿ ಇಂದು ಬೆಳಗ್ಗೆ ಕಾಡಾನೆ ದಾಳಿಗೆ ತುತ್ತಾಗಿ ಮೃತಪಟ್ಟ 29 ವರ್ಷ ವಯಸ್ಸಿನ ಶ್ರಮಿಕ ಮಹಿಳೆ ಮೀನಾ ಅವರ ಸಾವಿಗೆ ಸಂತಾಪ ಸೂಚಿಸಿರುವ ಮುಖ್ಯಮಂತ್ರಿಗಳು ತಕ್ಷಣ 15 ಲಕ್ಷ ರೂ ಪರಿಹಾರದ ಚೆಕ್ ವಿತರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೂಡಿಗೆರೆಯಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ರಕ್ಷಣಾಧಿಕಾರಿ ಮತ್ತು ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿಗಳು ತುರ್ತು ಸಭೆ ನಡೆಸಿದರು.

ಪಟ್ಟಣಕ್ಕೆ ಬಂದಿರುವ ಕಾಡಾನೆಗಳನ್ನು ವಾಪಾಸ್ ಕಾಡಿಗೆ ಕಳುಹಿಸಲು ತಕ್ಷಣ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಮೃತ ಮೀನಾ ಅವರ ಮೃತದೇಹ ಇಟ್ಟುಕೊಂಡು ಹೋರಾಟ ನಡೆಸುತ್ತಿರುವ ಪ್ರತಿಭಟನಾಕಾರರ ಜತೆ ದೂರವಾಣಿ ಮೂಲಕ ಸಂಪರ್ಕಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಕಾಡಾನೆ ಹಾವಳಿ ತಪ್ಪಿಸಲು ಅಗತ್ಯ ಎಲ್ಲಾ ಕ್ರಮಗಳನ್ನು ಕೈಗೊಳ್ಳುವ ಸೂಚನೆ ನೀಡಿದ್ದೇನೆ.

ಅರಣ್ಯ ಸಚಿವರೂ ಇಲ್ಲಿಗೆ ಬಂದು ಸುದೀರ್ಘ ಸಭೆ ನಡೆಸಿ ರಕ್ಷಣಾ ಕಾರ್ಯಗಳ ಕುರಿತಾಗಿ ಕ್ರಮ ಕೈಗೊಳ್ಳುತ್ತಾರೆ. ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಂತೆ ಕಾಫಿ ತೋಟಗಳು ಇರುವುದರಿಂದ ಕಾಡಾನೆಗಳು ಬರುತ್ತಿವೆ. ರೈಲ್ವೇ ಫೆನ್ಸಿಂಗ್ ಹಾಕುವುದೂ ಸೇರಿ ಅಗತ್ಯ ಕ್ರಮಗಳ ಕುರಿತು ಟಾಸ್ಕ್ ಫೋರ್ಸ್ ಗೆ ಸ್ಪಷ್ಟ ಸೂಚನೆ ನೀಡಲು ಅರಣ್ಯ ಸಚಿವರ ಜತೆ ಚರ್ಚಿಸಿದ್ದೇನೆ ಎಂದು ಮುಖ್ಯಮಂತ್ರಿಗಳು ಇದೇ ವೇಳೆ ತಿಳಿಸಿದ್ದಾರೆ.

ಕಾಡಾನೆಗಳಿಗೆ ಗುಂಡು ಹೊಡೆದು ಕೊಲ್ಲಬೇಕು ಎನ್ನುವ ಸ್ಥಳೀಯರ ಮತ್ತು ಪ್ರತಿಭಟನಾಕಾರರ ಒತ್ತಾಯದ ಕುರಿತಂತೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಆ ಹಂತಕ್ಕೆ ಯೋಚನೆ ಮಾಡುವುದು ಬೇಡ. ಇತರೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

# ಕಂಟೋನ್ಮೆಂಟ್ ರೈಲ್ವೆ ನಿಲ್ದಾಣಕ್ಕೆ ಮರು ಅಭಿವೃದ್ಧಿ

## 2 ಸಾವಿರ ವಾಹನಗಳಿಗೆ ಪಾರ್ಕಿಂಗ್ ಸೌಲಭ್ಯ



ಬೆಂಗಳೂರು: ನಗರದ ಕಂಟೋನ್ಮೆಂಟ್ ರೈಲು ನಿಲ್ದಾಣವನ್ನು 480 ಕೋಟಿ ರೂಪಾಯಿ ವೆಚ್ಚದಲ್ಲಿ ಮರು ಅಭಿವೃದ್ಧಿಗೊಳಿಸಲಾಗುತ್ತಿದ್ದು, ಮಲ್ಟಿಲೆವೆಲ್ ಬೇಸ್‌ಮೆಂಟ್ ಪಾರ್ಕಿಂಗ್ ಸೌಲಭ್ಯದಲ್ಲಿ ಸಾವಿರ ಕಾರುಗಳು ಮತ್ತು ಅಷ್ಟೇ ಸಂಖ್ಯೆಯಲ್ಲಿ ದ್ವಿಚಕ್ರ ವಾಹನಗಳನ್ನು ನಿಲ್ಲಿಸಲು ಪಾರ್ಕಿಂಗ್ ಸೌಲಭ್ಯಕ್ಕೆ ಕೂಡ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಬೆಂಗಳೂರು ಕೇಂದ್ರ ಕ್ಷೇತ್ರದ ಸಂಸದ ಪಿ ಸಿ ಮೋಹನ್ ಹೇಳಿದ್ದಾರೆ.

ನಿಲ್ದಾಣದಲ್ಲಿ ಈಗಿರುವ 25,000 ಚದರ ಅಡಿ ಜಾಗಕ್ಕೆ ಹೆಚ್ಚುವರಿಯಾಗಿ 7,60,000 ಚದರ ಅಡಿ ಜಾಗವನ್ನು ಸೇರಿಸಲಾಗುತ್ತಿದೆ. ಜೂನ್ 20, 2022 ರಂದು ಪ್ರಧಾನಿ ಮೋದಿ ಅವರು ಯೋಜನೆಗೆ ಅಡಿಪಾಯ ಹಾಕಿದ್ದರು.

ನಿನ್ನೆ ಮಂಗಳವಾರ ಪುನರಾಭಿವೃದ್ಧಿ ಕಾರ್ಯವನ್ನು ಪರಿಶೀಲಿಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಂಸದರು, ಹವಾನಿಯಂತ್ರಣ, ಬಹು ಟಿಕೆಟ್ ಕೌಂಟರ್‌ಗಳು, ಸೋಲಾರ್ ಮೇಲ್ಛಾವಣಿ, ನಾಲ್ಕು ಫುಟ್ ಓವರ್ ಬ್ರಿಡ್ಜ್‌ಗಳು, 500 ಕಾರುಗಳವರೆಗೆ ಮಲ್ಟಿಲೆವೆಲ್ ಬೇಸ್‌ಮೆಂಟ್ ಪಾರ್ಕಿಂಗ್ ಸೇರಿದಂತೆ ವಿಶ್ವದರ್ಜೆಯ ಪ್ರಯಾಣಿಕರ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು. ಮುಂಭಾಗದಲ್ಲಿ 500 ಬೈಕುಗಳು, ಹಾಗೆಯೇ ಹಿಂಭಾಗದ ಪ್ರವೇಶದ್ವಾರದಲ್ಲಿ, ಆ ಮೂಲಕ ನಿಲ್ದಾಣದಲ್ಲಿ ಒಟ್ಟು 1,000 ಕಾರುಗಳು ಮತ್ತು 1, 000 ದ್ವಿಚಕ್ರ ವಾಹನಗಳ ಪಾರ್ಕಿಂಗ್ ಗೆ ಅವಕಾಶ ಮಾಡಿಕೊಡಲಾಗುವುದು ಎಂದರು.

ಮುಖ್ಯ ಪ್ರವೇಶ ದ್ವಾರ: ಪುನರಾಭಿವೃದ್ಧಿಗೊಂಡ ನಿಲ್ದಾಣವು ವಸಂತನಗರದಿಂದ ಅದರ ಮುಖ್ಯ ದ್ವಾರವನ್ನು ಮತ್ತು ಮಿಲ್ಲರ್ಸ್ ರಸ್ತೆಯಿಂದ ಅದರ ಎರಡನೇ ಪ್ರವೇಶ ದ್ವಾರವನ್ನು ಹೊಂದಿರುತ್ತದೆ. ಎಲ್ಲಾ ಪ್ಲಾಟ್‌ಫಾರ್ಮ್‌ಗಳಿಗೆ ಪ್ರವೇಶವನ್ನು ಸಕ್ರಿಯಗೊಳಿಸಲು ಇಲ್ಲಿ ನಿರ್ಮಿಸಲಾಗುತ್ತಿರುವ ವಾಕ್‌ವೇಯನ್ನು ಸಂಪರ್ಕಿಸುವ ಹೆಚ್ಚುವರಿ ಎಫ್‌ಒಬಿಗೆ ಅವಕಾಶ ಕಲ್ಪಿಸುವಂತೆ ನಾನು ರೈಲ್ವೆ ಅಧಿಕಾರಿಗಳನ್ನು ಕೇಳಿಕೊಳ್ಳುತ್ತೇವೆ ಎಂದರು.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿ ಸಿಲ್ಕ್ ಬೋರ್ಡ್, ಕೆಆರ್ ಪುರ ಮತ್ತು ಹೆಬ್ಬಾಳ ಮೆಟ್ರೋ ನಿಲ್ದಾಣಗಳಲ್ಲಿ ವಿಮಾನ ನಿಲ್ದಾಣದ ಪ್ರಯಾಣಿಕರಿಗೆ ಲಗೇಜ್ ಚೆಕ್-ಇನ್ ಮಾಡಲು ಅನುಮತಿ ನೀಡುವ ಸೌಲಭ್ಯಗಳನ್ನು ಒದಗಿಸುವ ನಿಬಂಧನೆಯನ್ನು ಬಿಎಂಆರ್‌ಸಿಎಲ್ ಕಂಡುಕೊಳ್ಳಬೇಕು ಎಂದರು. ಬಂಬೂ ಬಜಾರ್ ನಿಲ್ದಾಣದ ಬಳಿ ಚಾರ್ಜಿಂಗ್ ಡಾಕ್‌ಗಳ ಜೊತೆಗೆ ಸೈಕಲ್‌ಗಳು ಮತ್ತು ಎಲೆಕ್ಟ್ರಿಕ್ ಬೈಕ್‌ಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದರು.

ನೆಲದಡಿ ಮೆಟ್ರೋ ನಿಲ್ದಾಣವನ್ನು ಕಂಟೋನ್ಮೆಂಟ್ ರೈಲು ನಿಲ್ದಾಣದೊಂದಿಗೆ ಸಂಪರ್ಕಿಸಲು ನಿರ್ಮಿಸಲಾಗುತ್ತಿರುವ ಸ್ಕೈವಾಕ್ ಬಗ್ಗೆ ಸಂಸದರು ಉಲ್ಲೇಖಿಸಿದರು. ಬಂಬೂ ಬಜಾರ್ ಮೆಟ್ರೋ ನಿಲ್ದಾಣವನ್ನು ಕಂಟೋನ್ಮೆಂಟ್ ನಿಲ್ದಾಣಕ್ಕೆ ಸಂಪರ್ಕಿಸಲು ಟ್ರಾವೆಲೇಟರ್ ನಿರ್ಮಿಸುವ ಭರವಸೆಯನ್ನು ಈ ಹಿಂದೆ ಬಿಎಂಆರ್‌ಸಿಎಲ್ ನೀಡಿತ್ತು ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಬೆಂಗಳೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಯೋಗೇಶ್ ಸಂಸದ ಮೋಹನ್ ರೈಲ್ವೆ ಆವರಣದೊಳಗೆ ಬಿಎಂಆರ್‌ಸಿಎಲ್‌ನಿಂದ ಮರುಅಭಿವೃದ್ಧಿ ಕಾರ್ಯಕ್ಕೆ ಸಂಬಂಧಿಸಿದಂತೆ ಎಲ್ಲಾ ಅನುಮತಿಗಳನ್ನು ತ್ವರಿತಗೊಳಿಸುವಂತೆ ರೈಲ್ವೆ ಇಲಾಖೆಗೆ ಸೂಚಿಸಿದರು.

## ನ.15 ಕ್ಕೆ ಬಿಜೆಪಿ-ಜೆಡಿಎಸ್ ಹಲವು ನಾಯಕರು ಕಾಂಗ್ರೆಸ್ ಸೇರ್ಪಡೆ : ಡಿಕೆಶಿ ಸ್ಫೋಟಕ ಹೇಳಿಕೆ



ನವದೆಹಲಿ: ರಾಜ್ಯ ರಾಜಕೀಯದಲ್ಲಿ ಆಪರೇಷನ್ ಹಸ್ತದ ಕುರಿತಂತೆ ಚರ್ಚೆಗಳು ನಡೆಯುತ್ತಿರುವ ಬೆನ್ನಲ್ಲೇ ಡಿಸಿಎಂ ಡಿ.ಕೆ.ಶಿವಕುಮಾರ್ ಸ್ಫೋಟಕ ಹೇಳಿಕೆಯೊದನ್ನು ನೀಡಿದ್ದಾರೆ.

ಸುದ್ದಿ ಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ನ ಹಲವು ನಾಯಕರು ದೀಪಾವಳಿ ನಂತರ ಅಂದ್ರೆ ನವೆಂಬರ್ 15 ಕ್ಕೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಲಿದ್ದಾರೆ.

ಈಗಾಗಲೇ ಬಿಜೆಪಿ-ಜೆಡಿಎಸ್ ನ ಹಲವು ನಾಯಕರು ನಮ್ಮ ಸಂಪರ್ಕದಲ್ಲಿದ್ದಾರೆ.

ನವೆಂಬರ್ 15 ರಂದು ಕಾಂಗ್ರೆಸ್ ಸೇರ್ಪಡೆಯಾಗಲಿದ್ದಾರೆ ಎಂದು ಹೇಳುವ ಮೂಲಕ ಹೊಸ ಬಾಂಬ್ ಸಿಡಿಸಿದ್ದಾರೆ.

ಕಾವೇರಿ ನೀರು ಮೀಸಲಿಡುವ ಬಗ್ಗೆ ಸರ್ಕಾರದಿಂದ ನೀರು ಮೀಸಲಿಡುವ ಬಗ್ಗೆ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. 'ಸುಪ್ರೀಂ' ಅನುಮತಿ ಪಡೆದು ಪ್ರತಿವರ್ಷ 24 ಟಿಎಂಸಿ ನೀರು ಮೀಸಲಿಟ್ಟು ಆದೇಶ ಹೊರಡಿಸಿದ್ದೇವೆ ಎಂದರು.

ಮೇಕೆದಾಟು ವಿಚಾರವನ್ನು CWMA ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. 'ಸುಪ್ರೀಂ' ಆದೇಶದಂತೆ ಬೆಂಗಳೂರಿಗೆ 24 ಟಿಎಂಸಿ ನೀರು ಮೀಸಲಿಡುತ್ತೇವೆ. ಮುಂದಿನ ವಾರ ಮೇಕೆದಾಟು ಯೋಜನೆ ವಿಚಾರ ಚರ್ಚೆಗೆ ಬರಲಿದೆ ಎಂದು ಹೇಳಿದರು.

# ಸ್ವಪಕ್ಷದ ವಿರುದ್ಧವೇ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಕಿಡಿ




ಮೈಸೂರು: ಬಿಜೆಪಿಯವರು ಪಕ್ಷಕ್ಕೆ ಬರುವಾಗ ಜಾಮೂನು ಕೊಡುತ್ತಾರೆ. ಅಧಿಕಾರ ಮುಗಿದ ಮೇಲೆ ವಿಷ ಕೊಡುತ್ತಾರೆ ಎಂದು ಸ್ವಪಕ್ಷದ ವಿರುದ್ಧವೇ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಕಿಡಿಕಾರಿದರು.

ನಗರದಲ್ಲಿ ಮಾತನಾಡಿದ ಅವರು, ನಾನು ಕಾಂಗ್ರೆಸ್‌ನಲ್ಲಿದ್ದವನು. ಅವರಾಗೆ ಪಕ್ಷಕ್ಕೆ ಸೇರಿಸಿಕೊಂಡರು. ಈಗ ಎಸ್.ಟಿ.ಸೋಮಶೇಖರ್ ಹೋದರೆ ಹೋಗಲಿ ಎಂದು ಮಾತನಾಡುತ್ತಿದ್ದಾರೆ. ನನ್ನನ್ನ ಪಕ್ಷ ಬಿಡಿಸಲು ರೆಡಿಯಾಗಿದ್ದಾರೆ. ನಾನು ಕ್ಷೇತ್ರದ ಅನುಕೂಲಕ್ಕಾಗಿ ಕೆಲಸ ಮಾಡುತ್ತಿದ್ದೇನೆ. ನನ್ನ ಕ್ಷೇತ್ರದ ಅಭಿವೃದ್ಧಿಗೆ ಸಿಎಂ, ಡಿಸಿಎಂ ಹತ್ತಿರ ಹೋಗುತ್ತೇನೆ. ಇದರಲ್ಲಿ ತಪ್ಪೇನಿದೆ? ಜೊತೆಗೆ ನಾನು ಸಿಎಂ, ಡಿಸಿಎಂ ಹೊಗಳುವುದನ್ನು ಸಹಿಸುತ್ತಿಲ್ಲ. ನನ್ನ ಕಚೇರಿಯಿಂದ ಕಾಂಗ್ರೆಸ್ ಗ್ಯಾರಂಟಿಯಿಂದ ಫಾಲೋಅಪ್ ಮಾಡಿದ್ದೇನೆ. ಇದರಿಂದ ನನ್ನ ಕ್ಷೇತ್ರದ ಜನರಿಗೆ ಅನುಕೂಲವಾಗಿದೆ. ಆದರೆ ಬಿಜೆಪಿಯವರು ಅದೆಲ್ಲ ಕಾಂಗ್ರೆಸ್ ಗ್ಯಾರಂಟಿ, ಅದನ್ನ ನೀವೇಕೆ ಉತ್ತೇಜನ ನೀಡುತ್ತೀರಿ ಎಂದು ಪ್ರಶ್ನೆ ಮಾಡುತ್ತಾರೆ. ಅರೇ, ಸರ್ಕಾರ ಯಾವುದಾದರೂ ಇರಲಿ. ಜನಕ್ಕೆ ಒಳ್ಳೆಯದು ಮಾಡುವುದು ಬೇಡವ ಎಂದು ಪ್ರಶ್ನಿಸಿದರು.

ನಾನು ಬಿಜೆಪಿ ಪಕ್ಷ ಬಿಟ್ಟು ಹೋಗಲ್ಲ. ನಾನು ಮಾನಸಿಕ, ದೈಹಿಕವಾಗಿ ಪಕ್ಷದಲ್ಲೆ ಇದ್ದೇನೆ. ಕಾಂಗ್ರೆಸ್ ಸೇರುತ್ತಾರೆ ಎಂಬುದ್ದೆಲ್ಲ ಊಹಾಪೋಹ. ನಾನು ಯಡಿಯೂರಪ್ಪ ಮಾತು ನಂಬಿ ಬಿಜೆಪಿಯಲ್ಲಿದ್ದೇನೆ. ಆದರೆ ಇವರೇ ಪಕ್ಷದಿಂದ ಓಡಿಸುವ ಕೆಲಸ ಮಾಡುತ್ತಿದ್ದಾರೆ. ಕಳೆದ ಚುನಾವಣೆಯಲ್ಲಿ ನಮ್ಮ ಪಕ್ಷದವರೆ ನನ್ನ ವಿರುದ್ಧ ಕೆಲಸ ಮಾಡಿದರು. ಈ ಬಗ್ಗೆ ದಾಖಲೆ ಸಮೇತ ದೂರು ಕೊಟ್ಟೆ. ಆದರೆ ಪ್ರಯೋಜನವಾಗಲಿಲ್ಲ. ಅವರ ಹುಟ್ಟಹಬ್ಬವನ್ನೇ ಕ್ಷೇತ್ರದಲ್ಲಿ ಅದ್ಧೂರಿಯಾಗಿ ಮಾಡಿದರು. ಇದೆಲ್ಲ ಏನ್ ಅರ್ಥ? ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾದಾಗ ನನ್ನನ್ನು ಯಡಿಯೂರಪ್ಪ ಉಳಿಸಿಕೊಂಡರು. ಯಡಿಯೂರಪ್ಪನವರ ವಿರುದ್ಧ ಐದಾರು ಜನರು ಮಾತನಾಡಿದರು. ಅವರ ವಿರುದ್ಧ ಪಕ್ಷದಲ್ಲಿ ಕ್ರಮ ತೆಗೆದುಕೊಳ್ಳಲಿಲ್ಲ. ಇದು ಕೂಡ ಪಕ್ಷದ ಹಿನ್ನೆಡೆಗೆ ಕಾರಣ ಅಸಮಾಧಾನ ಹೊರಹಾಕಿದರು.

## ಲೈಂಗಿಕ ದೌರ್ಜನ್ಯ ಪ್ರಕರಣ: ಮುರುಘಾ ಶ್ರೀಗಳಿಗೆ ಷರತ್ತು ಬದ್ಧ ಜಾಮೀನು



ಬೆಂಗಳೂರು: ಅಪ್ರಾಪ್ತ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಮುರುಘಾ ಮಠದ ಡಾ. ಶಿವಮೂರ್ತಿ ಶ್ರೀಗಳಿಗೆ ಕರ್ನಾಟಕ ಹೈಕೋರ್ಟ್ ಜಾಮೀನು ನೀಡಿದೆ.

ಮುರುಘಾಶ್ರೀ ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಶ್ರೀಗಳಿಗೆ ಏಳು ಷರತ್ತನ್ನು ವಿಧಿಸಿ ಜಾಮೀನು ನೀಡಿದೆ. ಅದರಂತೆ ಮುರುಘಾ ಶ್ರೀಗಳು ತಮ್ಮ ಪಾಸ್ ಪೋರ್ಟ್ ಅನ್ನು ಕೋರ್ಟ್ ವಶಕ್ಕೆ ನೀಡಬೇಕಿದೆ. ಇಬ್ಬರು ಶ್ಯೂರಿಟಿಗಳನ್ನು ಒದಗಿಸಬೇಕು. ಇನ್ನು ಚಿತ್ರದುರ್ಗಕ್ಕೆ ಹೋಗದಂತೆ ಷರತ್ತು ವಿಧಿಸಿದೆ.


2 ಲಕ್ಷ ರೂಪಾಯಿಗಳ ವೈಯಕ್ತಿಕ ಬಾಂಡ್ ಮತ್ತು ಅಷ್ಟೇ ಮೊತ್ತದ ಇಬ್ಬರ ಶ್ಯೂರಿಟಿಯ ಮೇಲೆ ಅವರಿಗೆ ಜಾಮೀನು ನೀಡಲಾಗಿದೆ. ಸಾಕ್ಷಿಗಳನ್ನು ಹಾಳು ಮಾಡದಂತೆ ಅಥವಾ ಸಾಕ್ಷಿಗಳ ಮೇಲೆ ಪ್ರಭಾವ ಬೀರದಂತೆ ಎಚ್ಚರಿಕೆ ನೀಡಲಾಗಿದೆ.

ವೀಕ್ಷಕರು ಜಾಮೀನನ್ನು ದುರುಪಯೋಗಪಡಿಸಿಕೊಳ್ಳಬಾರದು ಮತ್ತು ಅವರು ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದರೆ, ಅದು ಸ್ವಯಂಚಾಲಿತವಾಗಿ ರದ್ದಾಗುತ್ತದೆ ಎಂದು ಹೈಕೋರ್ಟ್ ಹೇಳಿದೆ.

ಮುರುಘಾ ಶ್ರೀಗೆ ಜಾಮೀನು ಸಿಕ್ಕರೂ ಮತ್ತೊಂದು ಅರ್ಜಿ ವಿಚಾರಣೆ ಬಾಕಿ ಇರುವ ಹಿನ್ನೆಲೆಯಲ್ಲಿ ಅವರಿಗೆ ಬಿಡುಗಡೆ ಭಾಗ್ಯವಿಲ್ಲ.

ಮುರುಘಾ ಶ್ರೀಗಳ ವಿರುದ್ಧ ಪೋಕ್ಸೊ ಕಾಯ್ದೆ ಅಡಿ ಪ್ರಕರಣ ದಾಖಲಿಸಲಾಗಿದ್ದು, ಕಳೆದ ವರ್ಷ ಸೆಪ್ಟೆಂಬರ್ 1 ರಂದು ಬಂಧಿಸಿದ್ದು, ಒಂದು ವರ್ಷದಿಂದ ಚಿತ್ರದುರ್ಗ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ.

## ಗೃಹಲಕ್ಷ್ಮಿ ಯೋಜನೆಯ ತಾಂತ್ರಿಕ ಸಮಸ್ಯೆಗೆ ಶೀಘ್ರವೇ ಪರಿಹಾರ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಂಗಳೂರು: ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಶೇಕಡ 95ರಷ್ಟು ಮನೆಯ ಒಡತಿಯರಿಗೆ ತಲುಪಿದ್ದು, ತಾಂತ್ರಿಕ ಸಮಸ್ಯೆಗೆ ಶೀಘ್ರವೇ ಪರಿಹಾರ ಸಿಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ಹೇಳಿದ್ದಾರೆ.

ಬೆಂಗಳೂರಿನ ಬಿಡಬ್ಲ್ಯುಎಸ್‌ಎಸ್ ಬಿ ಕಚೇರಿಯಲ್ಲಿರುವ ಬೆಂಗಳೂರು ಒನ್ ಕೇಂದ್ರದಲ್ಲಿ ನಡೆಯುತ್ತಿರುವ ಗೃಹಲಕ್ಷ್ಮಿ ಯೋಜನೆಯಡಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ತರಬೇತಿ ಕುರಿತು ಸಚಿವರು ಮಾಹಿತಿ ಪಡೆದು ಕೊಂಡರು. ಗೃಹಲಕ್ಷ್ಮಿ ಯೋಜನೆ ಕುರಿತು ಆಗಿರುವ ತಾಂತ್ರಿಕ ದೋಷಗಳನ್ನು ಶೀಘ್ರವೇ ಬಗೆಹರಿಸಬೇಕೆಂದು ಸಿಡಿಪಿಒಗಳಿಗೆ ಸೂಚನೆ ನೀಡಿದರು. ತಾಂತ್ರಿಕ ದೋಷ, ಸಿಬ್ಬಂದಿಗಳ ತೊಡಕಿನ ಕುರಿತು ಪರಿಶೀಲನೆ ನಡೆಸಿದರು.

ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಗೃಹಲಕ್ಷ್ಮಿ ಯೋಜನೆ ಇದುವರೆಗೂ ಶೇಕಡ 95 ರಷ್ಟು ಯಶಸ್ವಿಯಾಗಿದ್ದು, ಸಮಸ್ಯೆಗಳನ್ನು ಬಗೆಹರಿಸುವ ಸಲುವಾಗಿ ಪ್ರತಿದಿನ ಮೂರು ಜಿಲ್ಲೆಗಳ ಸಿಡಿಪಿಒಗಳಿಗೆ ತರಬೇತಿ ನೀಡಲಾಗುತ್ತಿದೆ ಎಂದರು.

ಗೃಹಲಕ್ಷ್ಮಿ ಯೋಜನೆಗೆ ಇದುವರೆಗೂ 1 ಕೋಟಿ 16 ಲಕ್ಷದ 65 ಸಾವಿರ ಮಹಿಳೆಯರು ನೋಂದಣಿ ಮಾಡಿಸಿದ್ದಾರೆ. ಈ ಪೈಕಿ ಆಗಸ್ಟ್ ನಲ್ಲಿ ಗೃಹಲಕ್ಷ್ಮಿ ಯರ ಆಕೌಂಟ್ ಗೆ- 2 ಸಾವಿರದ 119 ಕೋಟಿ ಹಣ ಹಾಕಲಾಗಿದ್ದು, ಈ ಮೂಲಕ ಶೇಕಡ 97ರಷ್ಟು ಡಿಬಿಟಿ ಮುಖಾಂತರ ಹಣ ಹಾಕಲಾಗಿದೆ ಎಂದು ಸಚಿವರು ವಿವರಿಸಿದರು. ಆಗಸ್ಟ್ ತಿಂಗಳಲ್ಲಿ ಐದು ಲಕ್ಷ ಕುಟುಂಬಗಳಿಗೆ ತಾಂತ್ರಿಕ ದೋಷದಿಂದ ಹಣ ಹೋಗಿಲ್ಲ. ಸೆಪ್ಟೆಂಬರ್ ನಲ್ಲಿ 82% ಕುಟುಂಬಗಳಿಗೆ ಹಣ ಹಾಕಲಾಗಿದ್ದು 12 ಲಕ್ಷ ಕುಟುಂಬಗಳಿಗೆ ತಾಂತ್ರಿಕ ದೋಷದಿಂದ ಅಥವಾ ಕೆವೈಸಿ ಸಮಸ್ಯೆಯಿಂದ ಹಣ ಬ್ಯಾಂಕ್ ಆಕೌಂಟ್ ನಲ್ಲಿ ಉಳಿದಿದೆ. ಇನ್ನು ಅಕ್ಟೋಬರ್ ನಲ್ಲಿ 2400 ಕೋಟಿ ರೂ ಬಿಡುಗಡೆಯಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು. ದೀಪಾವಳಿ ವೇಳೆ ಶೇಕಡ 100ರಷ್ಟು ಗುರಿ: ಆಗಸ್ಟ್ 15 ರೊಳಗೆ ನೋಂದಣಿ ಮಾಡಿಕೊಂಡವರಿಗೆ ಇದುವರೆಗೆ ದುಡ್ಡು ಬಾರದೇ ಇದ್ರೆ, ಒಟ್ಟಿಗೆ ಮೂರು ತಿಂಗಳ ಹಣ ಹಾಕಲಾಗುತ್ತದೆ.

ಇದುವರೆಗೆ ಹಣ ಬಾರದೇ ಇದ್ರೂ ಪೂರ್ಣ ಬಾಕಿ ಹಣ ಹಾಕಲಾಗುವುದು ಎಂದರು. ದೀಪಾವಳಿ ಹಬ್ಬದ ವೇಳೆಗೆ ಎಲ್ಲಾ ಫಲಾನುಭವಿಗಳಿಗೆ ಹಣ ಹೋಗುವಂತೆ ನೋಡಿಕೊಳ್ಳಲಾಗುವುದು ಎಂದರು. ಹೀಗಾಗಿ ಅಧಿಕಾರಿಗಳಿಗೆ ಟ್ರೈನಿಂಗ್ ನೀಡಲಾಗುತ್ತಿದ್ದು, ಇನ್ನು ಹತ್ತು ದಿನದಲ್ಲಿ ಗೃಹಲಕ್ಷ್ಮಿ ಗೊಂದಲ ಕ್ಲಿಯರ್ ಆಗಲಿದೆ ಎಂದರು. ಈ ವೇಳೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ನಿರ್ದೇಶಕರಾದ ಎಂ.ಎಸ್.ಅರ್ಚನಾ, ಇ-ಗವರ್ನೆನ್ಸ್ ಇಲಾಖೆಯ ನಿರ್ದೇಶಕ ದಿಲೀಶ್ ಉಪಸ್ಥಿತರಿದ್ದರು.

## ವಂಚನೆ ಪ್ರಕರಣ; ಚೈತ್ರಾ ಸೇರಿ 9 ಮಂದಿ ಆರೋಪಿಗಳ ವಿರುದ್ದ ಚಾರ್ಜ್‌ಶೀಟ್



ಬೆಂಗಳೂರು: ಟಿಕೆಟ್‌ಗೆ ಆಮಿಷವೊಡ್ಡಿ ಉದ್ಯಮಿಯಿಂದ 5 ಕೋಟಿ ಹಣ ಪಡೆದು ವಂಚನೆ ಮಾಡಿದ್ದ ಚೈತ್ರಾ ವಂಚನೆ ಪ್ರಕರಣ ಸಂಬಂಧ 1ನೇ ಎಸಿಎಂಎಂ ನ್ಯಾಯಾಲಯಕ್ಕೆ 9 ಆರೋಪಿಗಳ ವಿರುದ್ಧ ಸಿಸಿಬಿ ಅಧಿಕಾರಿಗಳು ಚಾರ್ಜ್ಶೀಟ್ ಸಲ್ಲಿಸಿದ್ದಾರೆ. ಚೈತ್ರಾ, ಹಾಲಶ್ರೀ ಸೇರಿ 9 ಮಂದಿ ವಿರುದ್ಧ ಚಾರ್ಜ್ಶೀಟ್ ಸಲ್ಲಿಸಲಾಗಿದೆ.

ಸಿಸಿಬಿ ಅಧಿಕಾರಿಗಳು 75 ಮಂದಿ ಸಾಕ್ಷಿಗಳ ಹೇಳಿಕೆ ದಾಖಲಿಸಿಕೊಂಡು ಸುಮಾರು 800 ಪುಟಗಳ ಚಾರ್ಜ್ಶೀಟ್ ಸಲ್ಲಿಸಿದ್ದಾರೆ. ಡಿಜಿಟಲ್ ಸಾಕ್ಷಿಗಳು, ಬ್ಯಾಂಕ್ ಸ್ಟೇಟ್ ಮೆಂಟ್ಗಳು, ಸಾಂದರ್ಭಿಕ ಸಾಕ್ಷಿಗಳು, ಸ್ವಾಮಿಜಿ ಕಾರು ಚಾಲಕ ಹಣ ಇಟ್ಟು ಹೋಗಿದ್ದ ಬಗ್ಗೆ ಸೇರಿದಂತೆ ಸ್ಪಾಟ್ ಮಹಜರ್ ನಡೆಸಿ ಹಣ ಸೀಜ್ ಮಾಡಿದ ಸ್ಥಳಗಳ ಬಗ್ಗೆ ಸಿಸಿಬಿ ಪೊಲೀಸರು ಚಾರ್ಜ್ಶೀಟ್ನಲ್ಲಿ ಉಲ್ಲೇಖಿಸಿದ್ದಾರೆ.

ಅಲ್ಲದೇ ಚೈತ್ರಾ ವಂಚನೆ ಪ್ರಕರಣದಲ್ಲಿ ಬರೋಬ್ಬರಿ 4 ಕೋಟಿ 11 ಲಕ್ಷ ರೂಪಾಯಿ ರಿಕವರಿ ಮಾಡಲಾಗಿದೆ. ಪ್ರಮುಖ ಆರೋಪಿ ಚೈತ್ರಾ, ಶ್ರೀಕಾಂತ್, ಗಗನ್ ಕಡೂರ್, ಹಾಲಶ್ರೀ, ಧನರಾಜ್ ಸೇರಿದಂತೆ 9 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆಯಾಗಿದೆ.

ದೂರುದಾರ ಗೋವಿಂದ ಬಾಬು ಪೂಜಾರಿ ಬಳಿ ಎಲ್ಲಾ ಆಡಿಯೋ, ವಿಡಿಯೋವನ್ನು ಸಿಸಿಬಿ ಪೊಲೀಸರು ಪಡೆದಿದ್ದಾರೆ. ಗೋವಿಂದ ಪೂಜಾರಿ ಬಳಿಯೇ ಡೀಲ್ ಸಂಬಂಧ 10 ವಿಡಿಯೋ ಪಡೆಯಲಾಗಿದೆ. ಆರೋಪಿಗಳ ಮೊಬೈಲ್ ಗಳ ಡೇಟಾ ರಿಟ್ರೀವ್ ವರದಿ ಕೂಡ ಉಲ್ಲೇಖಿಸಲಾಗಿದೆ. ಆರೋಪಿಗಳ ಮೊಬೈಲ್ ಚಾಟ್, ಕರೆಗಳ ಸಂಬಂಧ ಡೇಟಾ ರಿಟ್ರೀವ್ ಮಾಡಿ ವರದಿ ಸಲ್ಲಿಸಲಾಗಿದೆ. ಸದ್ಯ ಚೈತ್ರಾ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ.

## ಬರಗಾಲ ಸಂಬಂಧ ಯಾವ ಜಿಲ್ಲೆಗೂ ಹಣ ಕೊಟ್ಟಿಲ್ಲ: ಕೆ.ಎಸ್.ಈಶ್ವರಪ್ಪ ಆಕ್ಷೇಪ



ಬೆಂಗಳೂರು: ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬರಪೀಡಿತ ಪ್ರದೇಶಗಳಿಗೆ ಹಣ ಬಿಡುಗಡೆ ಮಾಡಿದ ಪಟ್ಟಿ ಬಿಡುಗಡೆಗೊಳಿಸಿದ್ದಾರೆ. ನಾನು ಅನೇಕ ಜಿಲ್ಲಾಧಿಕಾರಿಗಳ ಜೊತೆ ಚರ್ಚಿಸಿದ್ದೇನೆ. ಒಂದು ಜಿಲ್ಲೆಗೂ ಒಂದು ರೂಪಾಯಿ ಹೋಗಿಲ್ಲ ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಅವರು ಇಂದು ಟೀಕಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, 300 ಕೋಟಿಗೂ ಹೆಚ್ಚು ಹಣ ನೀಡಿದ್ದಾಗಿ ಹೇಳಿದ್ದಾರೆ. ಒಬ್ಬ ರೈತರಿಗೂ ಒಂದು ರೂಪಾಯಿ ನೀಡಿಲ್ಲ. ನಾವು ಜಿಲ್ಲೆಗಳ ರೈತರನ್ನು ಮಾತನಾಡಿಸಿದ್ದೇವೆ. ಬೆಳೆ ಮಾಹಿತಿ, ಭೇಟಿ ನೀಡಿದ ಮುಖಂಡರ ಬಗ್ಗೆ ಕೇಳಿದ್ದೇವೆ. ಒಬ್ಬರೂ ಬಂದಿಲ್ಲ ಎಂದಿದ್ದಾರೆ. ಭೀಕರ ಬರಗಾಲದಿಂದ ಜನರು ಗುಳೆ ಹೋಗುತ್ತಿದ್ದಾರೆ ಎಂದರು.

ಬರದ ಕುರಿತು ಸಿಎಂ ಸುಳ್ಳು ಹೇಳುತ್ತಿದ್ದಾರೆ. ಜಿಲ್ಲಾಧಿಕಾರಿಗಳು 'ಬರುತ್ತೆ ಸರ್, ಬರುತ್ತೆ ಸರ್' ಎನ್ನುತ್ತಾರೆ. ಶಾಸಕರ ನಿಧಿ 50 ಲಕ್ಷ ಬಿಡುಗಡೆ ಮಾಡಿದ್ದಾಗಿ ತಿಳಿಸಿ ತಿಂಗಳಾಗಿದೆ. ಆದರೆ, ಶಾಸಕರಿಗೂ ದುಡ್ಡು ಹೋಗಿಲ್ಲ. ಬರ ಪರಿಹಾರ ಹಣದ ಲೆಟರ್ ಹೋದರೆ ದುಡ್ಡು ಹೋದಂತಾಗುತ್ತದೆಯೇ ಎಂದು ಪ್ರಶ್ನಿಸಿದರು.

ರೈತರಿಗೆ ದ್ರೋಹ ಮಾಡುವ ಮೊದಲನೇ ಮುಖ್ಯಮಂತ್ರಿ ಇವರು ಎಂದು ಟೀಕಿಸಿದ ಅವರು, ತಕ್ಷಣ ಹಣ ಬಿಡುಗಡೆ ಮಾಡಿ; ಅದು ರೈತರಿಗೆ ತಲುಪುವಂತೆ ನೋಡಿಕೊಳ್ಳಿ ಎಂದು ಆಗ್ರಹಿಸಿದರು. ಶಾಸಕರಿಗೂ ಹಣ ಬಿಡುಗಡೆ ಮಾಡಿ ಎಂದು ಒತ್ತಾಯಿಸಿದರು. ಸೋಮಶೇಖರ್ ಅವರು ವಿಷ ಕುಡಿದಿದ್ದಾರಾ? ಇಡೀ ರಾಜ್ಯದ ಜನ ಬಿಜೆಪಿಯನ್ನು ನೋಡಿದ್ದಾರೆ. ಬಸವರಾಜ ಬೊಮ್ಮಾಯಿ ಬಂದು ಸಿಎಂ ಆದರು. ಅವರಿಗೆ ವಿಷ ಕೊಟ್ಟಿದ್ದೇವಾ? 17 ಜನ ಬಂದಿದ್ದರು. ಅವರು ಯಾವ ಕಾರಣಕ್ಕೂ ಪಕ್ಷ ಬಿಡುವುದಿಲ್ಲ ಎನ್ನುತ್ತಾರೆ. ಸೋಮಶೇಖರ್ ಅವರು ಪಕ್ಷದಲ್ಲಿ ನಿಷ್ಠೆಯಿಂದ ಇದ್ದು, ಈ ಪಕ್ಷದ ಕುರಿತು ನಂಬಿಕೆ ಇದ್ದರೆ ಇರಲಿ; ನನಗಿಷ್ಟವಿಲ್ಲ, ಅಧಿಕಾರ ಇದ್ದಾಗ ಮಾತ್ರ ಬರ್ತೀನಿ. ಇಲ್ಲಾಂದರೆ ಹೋಗ್ತೀನಿ ಎಂದರೆ ಅವರ ಇಷ್ಟ ಎಂದು ಈ ಕುರಿತ ಪ್ರಶ್ನೆಗೆ ಉತ್ತರ ಕೊಟ್ಟರು.

# ಚುನಾವಣಾ ರಾಜಕೀಯಕ್ಕೆ ಮಾಜಿ ಕೇಂದ್ರ ಸಚಿವ ಸದಾನಂದಗೌಡ ನಿವೃತ್ತಿ ಘೋಷಣೆ

ಹಾಸನ: ಮಹತ್ವದ ಬೆಳವಣಿಗೆಯಲ್ಲಿ ಬಿಜೆಪಿಯ ಹಿರಿಯ ನಾಯಕ, ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಮಾಜಿ ಕೇಂದ್ರ ಸಚಿವ ಡಿವಿ ಸದಾನಂದ ಗೌಡ ಅವರು ಚುನಾವಣಾ ರಾಜಕೀಯಕ್ಕೆ ಬುಧವಾರ ನಿವೃತ್ತಿ ಘೋಷಿಸಿದ್ದಾರೆ.

ಹಾಸನದಲ್ಲಿ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಬರ ಅಧ್ಯಯನದಲ್ಲಿ ಪಾಲ್ಗೊಂಡು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸದಾನಂದಗೌಡ ಅವರು ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ್ದಾರೆ. ಪಕ್ಷದಿಂದ ಗರಿಷ್ಠ ಲಾಭ ಪಡೆದಿದ್ದೇನೆ, ಹೆಚ್ಚಿನದಕ್ಕೆ ಆಸೆ ಪಡುವುದಿಲ್ಲ ಎಂದು ಹೇಳಿ ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಣೆ ಮಾಡಿದ್ದಾರೆ.

ಸದಾನಂದಗೌಡ ಅವರು ಪ್ರಸ್ತುತ ಅವರು ಲೋಕಸಭೆಯಲ್ಲಿ ಬೆಂಗಳೂರು ಉತ್ತರ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದು, 'ಚುನಾವಣಾ ರಾಜಕೀಯದಲ್ಲಿ ಮುಂದುವರಿಯದಿರಲು ನಿರ್ಧರಿಸಿದ್ದೇನೆ. ನನ್ನ 30 ವರ್ಷಗಳ ರಾಜಕೀಯ ಜೀವನದಲ್ಲಿ ಪಕ್ಷ ನನಗೆ ಎಲ್ಲವನ್ನೂ ನೀಡಿದೆ.

ನಾನು 10 ವರ್ಷಗಳ ಕಾಲ ಶಾಸಕನಾಗಿ, 20 ವರ್ಷ ಸಂಸದನಾಗಿ, ಒಂದು ವರ್ಷ ಮುಖ್ಯಮಂತ್ರಿಯಾಗಿ, 4 ವರ್ಷ ಪಕ್ಷದ ರಾಜ್ಯ ಘಟಕದ ಅಧ್ಯಕ್ಷನಾಗಿ ಮತ್ತು ನರೇಂದ್ರ ಮೋದಿ ಸರ್ಕಾರದಲ್ಲಿ ಏಳು ವರ್ಷ ಸಂಪುಟ ಸಚಿವನಾಗಿ ಸೇವೆ ಸಲ್ಲಿಸಿದ್ದೇನೆ.

ನಾನು ಹೆಚ್ಚು ಆಸೆಪಟ್ಟರೆ, ಜನ ನನ್ನನ್ನು ಸ್ವಾರ್ಥಿ ಎಂದು ಕರೆಯುತ್ತಾರೆ' ಎಂದು ಹೇಳಿದರು.

2021ರಲ್ಲಿ ಕೇಂದ್ರ ಸಚಿವರ ಪುನಾರಚನೆ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಆದೇಶದ ಮೇರೆಗೆ ಅವರು ಕೇಂದ್ರ ಸಚಿವ ಸ್ಥಾನ ತ್ಯಜಿಸಿದ್ದರು. ಮುಂದಿನ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅವರಿಗೆ ಟಿಕೆಟ್ ನೀಡುವುದಿಲ್ಲ ಎಂದು ಇತ್ತೀಚೆಗೆ ವದಂತಿಗಳು ಹಬ್ಬಿದ್ದವು.



ಆ ವಿಚಾರವಾಗಿ ಅಸಮಾಧಾನಗೊಂಡಿದ್ದ ಅವರು, ಪಕ್ಷದ ವರಿಷ್ಠರು ತಮ್ಮ ನಿಲುವು ತಿಳಿಸಬೇಕು ಎಂದು ಆಗ್ರಹಿಸಿದ್ದರು.

**ಜೆಡಿಎಸ್ ಜತೆಗಿನ ಮೈತ್ರಿ ಎನ್ಡಿಎ ನಿರ್ಧಾರ**

ಎನ್‌ಡಿಎ ವಿಚಾರಕ್ಕೆ ಬಂದರೆ ನಮ್ಮ ಕೇಂದ್ರ ನಾಯಕರು ನಿರ್ಧಾರ ಕೈಗೊಂಡಿದ್ದಾರೆ. ಆದರೆ, ನಮ್ಮ ಕಾರ್ಯಕರ್ತರು ಇಷ್ಟು ವರ್ಷ ಹೋರಾಡಿದ ಪಕ್ಷದೊಂದಿಗೆ ಏಕಾಏಕಿ ಚುನಾವಣೆಗೆ ಸ್ಪರ್ಧಿಸುವುದು ಕಷ್ಟವಾಗುವುದರಿಂದ ರಾಜ್ಯದಲ್ಲಿ ಇದನ್ನು ಜಾರಿಗೆ ತರಲು ಸೂಕ್ತ ಮಾರ್ಗಸೂಚಿಗಳನ್ನು ನೀಡುವಂತೆ ನಾವು ಅವರಿಗೆ ಮನವಿ ಮಾಡಿದ್ದೇವೆ.

ರಾಜ್ಯ ನಾಯಕರು ಮತ್ತು ವಿರೋಧ ಪಕ್ಷದ ನಾಯಕರ ನೇಮಕ ವಿಳಂಬವಾಗುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದು ತಮಗೆ ಮುಜುಗರ ಉಂಟು ಮಾಡಿದೆ. ವಿಳಂಬವನ್ನು ನಾವು ಒಪ್ಪಿಕೊಳ್ಳುತ್ತೇವೆ. ಅದು ಮುಜುಗರವನ್ನು ಉಂಟುಮಾಡಿದೆ. ನಮ್ಮ ನಾಯಕರು ಈ ವಿಷಯದ ಬಗ್ಗೆ ವೈಯಕ್ತಿಕ ಅಭಿಪ್ರಾಯಗಳನ್ನು ಸಂಗ್ರಹಿಸಿದ್ದಾರೆ ಮತ್ತು ಐದು ರಾಜ್ಯಗಳ ಚುನಾವಣೆಗಳು ಮುಗಿದ ನಂತರ ಘೋಷಣೆ ಮಾಡಬಹುದೆಂದು ನಾವು ನಿರೀಕ್ಷಿಸುತ್ತೇವೆ ಎಂದು ಹೇಳಿದರು.

**ಹಾಸನದಲ್ಲಿ ಬೆಳೆ ನಷ್ಟ ಸಮೀಕ್ಷೆ**

ಹಾಸನ ಜಿಲ್ಲೆಯಲ್ಲಿ ಬೆಳೆ ನಷ್ಟ ಸಮೀಕ್ಷೆ ನಡೆಸಿದ ಬಳಿಕ ಸದಾನಂದ ಗೌಡ, ಈ ಹೇಳಿಕೆ ನೀಡಿದ್ದಾರೆ.

ರಾಜ್ಯದಲ್ಲಿ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಬಿಜೆಪಿಯ ವಿವಿಧ ತಂಡಗಳು ಸಮೀಕ್ಷೆ ನಡೆಸುತ್ತಿವೆ. ವರದಿಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಸಲ್ಲಿಸಲು ಬಿಜೆಪಿ ನಾಯಕರು ನಿರ್ಧರಿಸಿದ್ದಾರೆ.

ಲೋಕಸಭೆ ಚುನಾವಣೆಗೆ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಳ್ಳುವ ಕುರಿತು ಮಾತನಾಡಿದ ಗೌಡರು, ಕೇಂದ್ರ ನಾಯಕರು ನಿರ್ಧಾರ ಕೈಗೊಂಡಿದ್ದಾರೆ ಎಂದರು.

**ಈಗ ಮಳೆ ಬಂದರೆ ರೈತರಿಗೇನೂ ಪ್ರಯೋಜನವಿಲ್ಲ**

ಹಾಸನ ಜಿಲ್ಲೆಯಲ್ಲಿ ಬರ ಅಧ್ಯಯನ ನಡೆಸಿ ಮಾತನಾಡಿದ ಮಾಜಿ ಸಿಎಂ ಸದಾನಂದಗೌಡ ಅವರು, ನಾವು ಬರ ಪ್ರವಾಸ ಬಂದಾಗ ಮಳೆ ಆರಂಭವಾಗಿದೆ. ಆದರೆ ಈಗ ಮಳೆ ಬಂದರೆ ರೈತರಿಗೆ ಏನೂ ಪ್ರಯೋಜನ ಆಗಲಾರದು ಎನ್ನೋದು ನನ್ನಭಾವನೆ. ಬಿಜೆಪಿ 14 ತಂಡಗಳಾಗಿ ರಾಜ್ಯದಲ್ಲಿ ವ್ಯಾಪಕ ಪ್ರವಾಸ ಮಾಡುತ್ತಿದೆ. ಈ ಮೂಲಕ ಕೇಂದ್ರ ರಾಜ್ಯ ಸರ್ಕಾರ ಎರಡೂ ಕೂಡ ಪರಿಹಾರ ನೀಡಬೇಕು ಎಂದು ಆಗ್ರಹ ಮಾಡುತ್ತೇವೆ.

ನಮ್ಮ ಕೇಂದ್ರ ಸರ್ಕಾರದ ಮೇಲೆ ಕೂಡ ಒತ್ತಡ ಹಾಕುತ್ತೇವೆ. ಆದರೆ ಯಾರು ಸಮಸ್ಯೆ ಬಗ್ಗೆ ತಕ್ಷಣ ಸ್ಪಂಧಿಸುವ ಕೆಲಸ ಮಾಡಬೇಕಿತ್ತೋ ಅವರ ವೈಫಲ್ಯವನ್ನು ನಾವು ಜನರ ಮುಂದಿಡುತ್ತೇವೆ. ಆಗಸ್ಟ್ ತಿಂಗಳಲ್ಲಿ ಹಾಸನ ಜಿಲ್ಲೆಯಲ್ಲಿ ಶೇಕಡಾ 73 ರಷ್ಟು ಮಳೆ ಕೊರತೆ ಆಗಿದೆ. ಇದು 125 ವರ್ಷಗಳಲ್ಲಿ ಯೇ ಅತ್ಯಂತ ಕಡಿಮೆ ಆಗಿದೆ ಎಂಬ ಮಾಹಿತಿ ಇದೆ. ರೈತರ ಪರಿಸ್ಥಿತಿ ಕಣ್ಣಲ್ಲಿ ನೀರು ತರಿಸುತ್ತಿದೆ, ರೈತರ ಹಾಳಾದ ಬೆಳೆ ಪ್ರದರ್ಶನ ಮಾಡಿ ಪರಿಸ್ಥಿತಿಯ ಕರಾಳತೆ ವಿವರಿಸಿದರು.

**ರಾತ್ರಿ ವೇಳೆ ಒಂದು ಗಂಟೆಗೆ ಕರೆಂಟ್ ಕೊಡ್ತಾರೆ:** ಮಳೆಯಿಲ್ಲದೆ ರೈತರಿಗೆ ದೊಡ್ಡ ಆಘಾತ ಆಗಿದೆ, ಮಳೆ ಬರದೆ ಹೀಗೆ ಆಗಿರೋದು ನಮ್ಮ ಕೈಲಿಲ್ಲ. ಆದರೆ ಅಲ್ಪ ಸ್ವಲ್ಪ ಬೆಳೆ ಉಳಿಸಲು ಪಂಪ್ ಸೆಟ್ ಬಳಸೋಣ ಎಂದರೆ ಕರೆಂಟ್ ಇಲ್ಲ. ರಾತ್ರಿ ವೇಳೆ ಒಂದು ಗಂಟೆಗೆ ಕರೆಂಟ್ ಕೊಡ್ತಾರೆ, ಆದರೆ ಕರೆಂಟ್ ಸಮಸ್ಯೆಯಿಂದ ಮನೆಯಿಂದ ಆಚೆ ಬರಲಾಗದೆ ಜನರು ಪರದಾಡುತ್ತಿದ್ದಾರೆ. ನಿನ್ನೆ ಸಿಎಂ ಹೇಳ್ತಾರೆ ರೈತರಿಗೆ ನಿತ್ಯ ಐದು ಗಂಟೆ ಕೊಡ್ತಿವಿ ಅಂತಾರೆ, ಆದರೆ ಅದು ಇನ್ನು ಜಾರಿ ಆಗಿಲ್ಲ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

# ಸಮಾಜ ಕಲ್ಯಾಣ ಇಲಾಖೆ ಇಮೇಜ್ ಬದಲಾವಣೆಗೆ ವಾರ್ಡನ್, ಅಧೀಕ್ಷಕರ ಪಾತ್ರ ಮುಖ್ಯವಾಗಿದೆ: ಸಚಿವ ಡಾ.ಎಚ್.ಸಿ.ಮಹಾದೇವಪ್ಪ

ಧಾರವಾಡ: ಸಮುದಾಯ ಅಭಿವೃದ್ಧಿ, ಶಿಕ್ಷಣ ಕ್ರಾಂತಿ, ವಿದ್ಯಾರ್ಥಿಗಳಲ್ಲಿ ಉತ್ತಮ ಆರೋಗ್ಯ, ಶಿಸ್ತು, ರಾಗಣ್ಣ ಭಿಮಾನ ಬೆಳೆಸುವಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪಾತ್ರ ಮುಖ್ಯವಾಗಿದ್ದು, ಇಲಾಖೆಯ ಬಗ್ಗೆ ಸಮಾಜದಲ್ಲಿ ಉತ್ತಮ ಇಮೇಜ್ ಬೆಳೆಸುವ ಜವಾಬ್ದಾರಿ ಮುಖ್ಯವಾಗಿ ವಸತಿ ನಿಲಯಗಳ ವಾರ್ಡನ್ ಮತ್ತು ಅಧೀಕ್ಷಕರ ಮೇಲಿದೆ. ಅವರು ನಮ್ಮ ಇಲಾಖೆಯ ರಾಯಭಾರಿಗಳಿದ್ದಂತೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರು ಹೇಳಿದರು.

ಅವರು ಮಧ್ಯಾಹ್ನ ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಸಮಾಜ ಕಲ್ಯಾಣ ಇಲಾಖೆ ಮತ್ತು ಇಲಾಖೆ ವ್ಯಾಪ್ತಿಯ ಎಲ್ಲ ನಿಗಮ, ಮಂಡಳಿ, ಆಯೋಗಗಳಿಂದ ಅನುಗಣ್ಣನಗೊಳ್ಳುತ್ತಿರುವ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಆಯಾ ಜಿಲ್ಲೆಗಳಲ್ಲಿ ಇಲಾಖೆಯಿಂದ ನಿರ್ಮಿಸುತ್ತಿರುವ ವಸತಿ ನಿಲಯದ ಕಟ್ಟಡಗಳ ಗುಣಮಟ್ಟ ಮತ್ತು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳು ಕ್ರಮವಹಿಸಬೇಕು. ಧಾರವಾಡ ಜಿಲ್ಲೆ ಶೈಕ್ಷಣಿಕ ಹಬ್ಬ ಆಗಿರುವುದರಿಂದ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರ ಮನವಿ ಮೇರೆಗೆ ವಿಶೇಷವಾಗಿ ಧಾರವಾಡ ಜಿಲ್ಲೆಗೆ ಹೆಚ್ಚು ವಸತಿನಿಲಯಗಳ ನಿರ್ಮಾಣಕ್ಕೆ ಅನುದಾನ, ಅನುಮೋದನೆ ನೀಡಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಲಿ ಎಂದು ಸಚಿವರು ಸೂಚಿಸಿದರು.

ಬೆಳಗಾವಿ ವಿಭಾಗದ ಏಳು ಜಿಲ್ಲೆಗಳಲ್ಲಿ 206 ಬಾಲಕರ ಹಾಗೂ 64 ಬಾಲಕಿಯರ ಮೆಟ್ರಿಕ್ ಪೂರ್ವ ವಸತಿ ನಿಲಯಗಳು ಸೇರಿ ಒಟ್ಟು 270 ವಿದ್ಯಾರ್ಥಿ ವಸತಿ ನಿಲಯಗಳಿವೆ. ಮೆಟ್ರಿಕ್ ಪೂರ್ವ 14,619 ಬಾಲಕರು ಮತ್ತು 5,722 ಬಾಲಕಿಯರು ಸೇರಿ ಒಟ್ಟು 20,341 ವಿದ್ಯಾರ್ಥಿ, ವಿದ್ಯಾರ್ಥಿನೀಯರು ಸಮಾಜ ಕಲ್ಯಾಣ ವಸತಿ ನಿಲಯಗಳಲ್ಲಿ ಅಧ್ಯಯನ ಮಾಡುತ್ತಿದ್ದಾರೆ.

ಏಳು ಜಿಲ್ಲೆಗಳು ಸೇರಿ ಮೆಟ್ರಿಕ್ ನಂತರದ 87 ಪುರುಷ ಮತ್ತು 52 ಮಹಿಳಾ ಸೇರಿ 139 ವಿದ್ಯಾರ್ಥಿ ನಿಲಯಗಳಿವೆ. ಒಟ್ಟು 14,963 ಪುರುಷ ಹಾಗೂ 8,520 ಮಹಿಳಾ ಸೇರಿ ಒಟ್ಟು 23,483 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಎಲ್ಲ ವಿದ್ಯಾರ್ಥಿಗಳಿಗೆ ಉತ್ತಮ ಊಟ, ಶೈಕ್ಷಣಿಕ ಸೌಲಭ್ಯ ಮತ್ತು ಮೂಲಸೌಕರ್ಯಗಳನ್ನು ಇಲಾಖೆಯಿಂದ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ವಿವಿಧ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿ ನಿಲಯಗಳ ದುರಸ್ತಿಗೆ ರೂ.1026.73 ಕೋಟಿ ಮೋತ್ತದ ಅನುದಾನ ಮಂಜೂರಾತಿ ನೀಡಿ, ಈಗಾಗಲೇ ರೂ.753.28 ಕೋಟಿ ಹಣ ಬಿಡುಗಡೆ ಮಾಡಲಾಗಿದೆ. ಇಲಾಖೆಯಿಂದ ಸ್ವಂತ ಹಾಸ್ಟೆಲ್ಗಳನ್ನು ಹೊಂದಲು ಸುಮಾರು 42 ಕಟ್ಟಡ ನಿರ್ಮಾಣದ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಸಚಿವರು ಹೇಳಿದರು.

ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿವೇತನ ನೀಡುವ ಕಾರ್ಯಕ್ರಮ ಮುಂದುವರೆದಿದ್ದು, 2022-23 ನೇ



ಸಾಲಿಗೆ 24,177 ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದರು. ಮತ್ತು ಪ್ರಸಕ್ತ ಸಾಲಿಗೆ 11,263 ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದು, ಪ್ರೋತ್ಸಾಹಧನ ಬಿಡುಗಡೆ ಪ್ರಗತಿಯಲ್ಲಿದೆ. ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮುಂದುವರೆಸಲಾಗಿದೆ ಎಂದು ಸಚಿವರು ಹೇಳಿದರು.

ಪ್ರಗತಿ ಕಾಲೋನಿ ಯೋಜನೆಯಡಿ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 28,248.67 ಲಕ್ಷ ರೂ.ಗಳ ಅನುದಾನ ಮಂಜೂರಾತಿ ನೀಡಿ 14,289.96 ಲಕ್ಷ ರೂ.ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳು ಪ್ರಗತಿಯಲ್ಲಿವೆ. ಬೆಳಗಾವಿ ವಿಭಾಗದ 7 ಜಿಲ್ಲೆಗಳು ಸೇರಿ ಸಮಾಜ ಕಲ್ಯಾಣ ಇಲಾಖೆಯಿಂದ 1,731 ಸಮುದಾಯ ಭವನಗಳ ನಿರ್ಮಾಣಕ್ಕೆ ಅನುಮೋದನೆ ನೀಡಿ 35,309.12 ಲಕ್ಷ ರೂ.ಗಳ ಅನುದಾನ ಮಂಜೂರಾತಿ ನೀಡಲಾಗಿದೆ. ಈಗ ಪ್ರಸ್ತುತದಲ್ಲಿ 1,277 ಸಮುದಾನ ಭವನಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, 352 ಸಮುದಾಯ ಭವನಗಳ ಕಾಮಗಾರಿ ಪ್ರಗತಿಯಲ್ಲಿವೆ. ಮತ್ತು 55 ಸಮುದಾಯ ಭವನಗಳ ನಿರ್ಮಾಣ ಕಾರ್ಯ ಸಧ್ಯದಲ್ಲಿಯೇ ಆರಂಭವಾಗಲಿದೆ ಎಂದು ಸಚಿವ ಡಾ.ಹೆಚ್.ಸಿ. ಮಹಾದೇವಪ್ಪ ಅವರು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಜನಾಂಗದವರಿಗೆ ಸ್ಮಶಾನ ಭೂಮಿ ಖರೀದಿಸಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಬೆಳಗಾವಿ ವಿಭಾಗದ 7 ಜಿಲ್ಲೆಗಳು ಸೇರಿ 1,706.06 ರೂ. ಲಕ್ಷಗಳ ಮೊತ್ತದ ಅನುದಾನ ಮಂಜೂರಾತಿ ನೀಡಲಾಗಿದೆ. ಇದರಲ್ಲಿ ಸುಮಾರು 31 ಗ್ರಾಮಗಳಿಗಾಗಿ 21.08 ಎಕರೆ ಭೂಮಿಯನ್ನು ಖರೀದಿಸಲಾಗಿದೆ. ಮತ್ತು ಸ್ಮಶಾನ ಭೂಮಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು 139 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ 7 ಜಿಲ್ಲೆಗಳು ಸೇರಿ 185 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ವಿವಿಧ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಪೂರೈಸುವ ಆಹಾರದ ಗುಣಮಟ್ಟ ಕಾಪಾಡಿಕೊಂಡು ಬರಲು ಅಗತ್ಯ ಅನುದಾನ ಮತ್ತು ಯೋಜನೆಗೆ ತಿದ್ದುಪಡಿಗಳನ್ನು ತರಲಾಗುವುದು. ಜನವರಿ 2023 ರಿಂದ ಇಲ್ಲಿಯವರೆಗೆ ಬೆಳಗಾವಿ ವಿಭಾಗದ 7 ಜಿಲ್ಲೆಗಳು ಸೇರಿ ಒಟ್ಟು 343 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, 533 ಜನ ಸಂತ್ರಸ್ಥರಿದ್ದಾರೆ. 482.60 ಲಕ್ಷ ಪರಿಹಾರ ಮೊತ್ತ ವಿತರಿಸಲಾಗಿದ್ದು, ಇದರಲ್ಲಿ ಸುಮಾರು 8 ಲಕ್ಷ ಬಾಕಿ ಮೊತ್ತವಿದೆ. ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ಆಗುವ ಪ್ರಮಾಣ ಕಡಿಮೆ ಇದ್ದು, ಈ ಕುರಿತು ಡಿಆರ್ಸಿ ಕಾಯ್ದೆಗೆ ತಿದ್ದುಪಡಿ ತಂದು ನಾಗರಿಕ ಹಕ್ಕು ಪೊಲೀಸ್ರಿಗೆ ಎಫ್ಐಆರ್ ಹಾಗೂ ತನಿಖೆಯ ಕುರಿತು ಹೆಚ್ಚಿನ ಅಧಿಕಾರ ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಯೋಜನೆ ಮತ್ತು ಕಾರ್ಯಕ್ರಮಗಳು ಸಮಾಜದ ಅಭಿವೃದ್ಧಿ ಮತ್ತು ಸಾರ್ವಜನಿಕರ ಜೀವನ ಉತ್ತಮ ಪಡಿಸುವಿಕೆಯಲ್ಲಿ ಪ್ರಮುಖ ಪಾತ್ರ ವಹಿಸುವುದರಿಂದ ಇಲಾಖೆಯ ತಾಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಹೆಚ್ಚು ಕಾಳಜಿ ಮತ್ತು ಕಳಕಳಿಯಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕೆಂದು ಸಚಿವ ಡಾ.ಹೆಚ್.ಚಿ. ಮಹಾದೇವಪ್ಪ ತಿಳಿಸಿದರು.

ಶಾಸಕ ಅಬ್ಬಯ್ಯ ಪ್ರಸಾದ ಅವರು ಮಾತನಾಡಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಅಟ್ರಾಸಿಟಿ ಕೇಸ್ಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಅನ್ಯಾಯಕ್ಕೆ ಒಳಗಾದವರಿಗೆ ಪರಿಹಾರ ಮತ್ತು ನ್ಯಾಯ ಒದಗಿಸುವಲ್ಲಿ ಹೆಚ್ಚು ಪ್ರಯತ್ನಿಸಬೇಕು. ಅನುಕಂಪ ಆಧಾರದ ಉದ್ಯೋಗ ನೀಡುವಲ್ಲಿ ಮಾನವೀಯತೆ ತೋರಬೇಕೆಂದು ಅವರು ಹೇಳಿದರು.

ಶಾಸಕ ಎನ್.ಎಚ್. ಕೋನರೆಡ್ಡಿ ಅವರು ಮಾತನಾಡಿ, ಧಾರವಾಡ ಜಿಲ್ಲೆಗೆ ವಿದ್ಯಾರ್ಥಿಗಳ ವಸತಿ ನಿಲಯದ ಬೇಡಿಕೆ ಇದ್ದು, ಸಚಿವರು ಹೆಚ್ಚಿನ ಅನುದಾನ ನೀಡಬೇಕು. ಮತ್ತು ವಸತಿ ನಿಲಯದಲ್ಲಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸೌಕರ್ಯಗಳನ್ನು ಹೆಚ್ಚಿಸಬೇಕೆಂದು ಹೇಳಿದರು.

ವೇದಿಕೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಕ್ಯಾಪ್ಟನ್ ಪಿ.ಮಣಿವಣ್ಣನ, ಆಯುಕ್ತ ರಾಕೇಶಕುಮಾರ ಮತ್ತು ರಾಜ್ಯ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಗಳ ರಾಜ್ಯ ಸಲಹಾ ಸಮಿತಿ ಸದಸ್ಯ ಹಾಗೂ ಸರಕಾರದ ನಿವೃತ್ತ ಪ್ರಧಾನ ಕಾರ್ಯದರ್ಶಿ ಇ.ವೆಂಕಟಾಚಲ, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಮಹಾನಗರ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ, ಬೆಳಗಾವಿ ವಿಭಾಗದ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಉಪ ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ಗಡಾದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್ ಇದ್ದರು.

ಸಭೆಯಲ್ಲಿ ಬೆಳಗಾವಿ ಕಂದಾಯ ವಿಭಾಗದ ಎಲ್ಲ ಜಿಲ್ಲೆಗಳ ಸಮಾಜ ಕಲ್ಯಾಣಾಧಿಕಾರಿಗಳು, ಜಿಲ್ಲಾ ವ್ಯವಸ್ಥಾಪಕರು, ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ದೇವರಾಜ ಅರಸು ಅಭಿವೃದ್ಧಿ ನಿಗಮ, ಜಾಂಬವಂತ ಅಭಿವೃದ್ಧಿ ನಿಗಮದ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಕೇಂದ್ರ ಕಚೇರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ರೈತರಿಂದ ಪ್ರತಿ ಕ್ವಿಂಟಾಲ್ಗೆ ರೂ.2.090 ದರದಲ್ಲಿ ಮೆಕ್ಕೆಜೋಳ ಖರೀದಿ

ಧಾರವಾಡ: ಕರ್ನಾಟಕ ಸರ್ಕಾರದ ಆದೇಶದ ಪ್ರಕಾರ ಮೆಕ್ಕೆಜೋಳ ಬೆಳೆದ ರೈತರಿಗೆ ನೆರವಾಗಲು ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳವು ರೈತರಿಂದ ಮೆಕ್ಕೆಜೋಳವನ್ನು ಪ್ರತಿ ಕ್ವಿಂಟಲ್ಗೆ ರೂ.2,090/- ರಂತೆ ಸರ್ಕಾರದಿಂದ ನಿಗದಿ ಪಡಿಸಿದ ಬೆಲೆ ನೀಡಿ ತೇವಾಂಶ ಮತ್ತು ಗುಣಮಟ್ಟದ ನಿಬಂಧನೆಗಳಿಗೆ ಒಳಪಟ್ಟು ಖರೀದಿಸಲಾಗುತ್ತದೆ.

ಪ್ರತಿ ಕ್ವಿಂಟಲ್ಗೆ ಎರಡು ಗೋಣಿ ಚೀಲದ ಮೊತ್ತ (59 ಕೆ.ಜಿ. ಸಾಮರ್ಥ್ಯದ) ಮತ್ತು ಸಾಗಾಣಿಕ ಪ್ರೇತ್ಸಾಹವಾಗಿ ರೂ.160/-ಗಳನ್ನು ಸೇರಿಸಿ ಒಟ್ಟಾರೆ ರೂ. 2,250/- ಪ್ರತಿ ಕ್ವಿಂಟಲ್ಗೆ ಖರೀದಿಸಲಾಗುವುದು ಎಂದು ಧಾರವಾಡ ಪಶು ಆಹಾರ ಘಟಕದ ಪ್ರಾಂತೀಯ ನಿರ್ದೇಶಕ ಡಿ. ಅಶೋಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೆಕ್ಕೆಜೋಳವನ್ನು ನೇರವಾಗಿ ಜಿಲ್ಲಾ ಹಾಲು ಒಕ್ಕೂಟಗಳ ಮೇಲ್ವಿಚಾರಣೆ ಸಹಕಾರದೊಂದಿಗೆ ಖರೀದಿಸುವ ಪ್ರಕ್ರಿಯೆಯನ್ನು ನವೆಂಬರ್ 13, 2023 ರಿಂದ ಪ್ರಾರಂಭಿಸಲಾಗುವುದು. ರೈತರು ವೈಯಕ್ತಿಕವಾಗಿ ಪಶು ಆಹಾರ ಕಾರ್ಖಾನೆಗೆ ಆಗಮಿಸುವ ಬದಲು ಸರ್ಕಾರದ ಕೃಷಿ ಇಲಾಖೆ ಸಿದ್ಧಪಡಿಸಿದ ಫ್ರೂಟ್ಸ್ ಐಡಿ ಹೊಂದಿರುವ ಅರ್ಹ ರೈತರು ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಪ್ರಸ್ತುತ ಲಭ್ಯವಿರುವ ಕ್ಷೀರಸಿರಿ ತಂತ್ರಾಂಶದ ಮೂಲಕ ನೊಂದಾಯಿಸಿ, ಮೆಕ್ಕೆಜೋಳ ಖರೀದಿಸುವ ಪ್ರಕ್ರಿಯೆಯನ್ನು ಅನುಗಣ್ಣನಕ್ಕೆ ತರುವುದಾಗಿ ತಿಳಿಸಿದ್ದಾರೆ.

ಸರಬರಾಜು ಮಾಡಬಹುದಾದ ಪ್ರಮಾಣವನ್ನು ಪ್ರತಿಯೊಬ್ಬ ರೈತರಿಂದ ಗರಿಷ್ಟ ಮಿತಿ 1,000 ಕ್ವಿಂಟಲ್ ಮೆಕ್ಕೆಜೋಳ ಖರೀದಿಗೆ ಸೀಮಿತಗೊಳಿಸಿದ್ದು, ಮಧ್ಯವರ್ತಿಗಳಿಗೆ ಅವಕಾಶ ಇರುವುದಿಲ್ಲ. ಈ ಅವಕಾಶವನ್ನು ಉಪಯೋಗಿಸಿಕೊಂಡು ರೈತರೇ ನೇರವಾಗಿ ಸರಬರಾಜು ಮಾಡಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು ಡಾ. ಆರ್ಡಿ. ಪಾಟೀಲ್-7022115845,ಡಾ. ಬಾಳಪ್ಪ ಮುನವಳ್ಳಿ-7019913430. ಸತೀಶ ಖವಟಕೊಪ್ಪ-9686749323 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಹಾಲು ಮಹಾಮಂಡಳ ಪಶು ಆಹಾರ ಘಟಕದ ಪ್ರಾಂತೀಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆ ಕಾಣೆ



ಧಾರವಾಡ: ಧಾರವಾಡ ಜಿಲ್ಲೆಯ ಅರಳಿಕಟ್ಟಿ ಗ್ರಾಮದ ನಿವಾಸಿ ದೇವಕ್ಕ ಕೋಂ ಯಲ್ಲಪ್ಪ ಶಿವಣ್ಣವರ (70) ಅವರು ನವೆಂಬರ್ 24, 2022 ರಂದು ಧಾರವಾಡದ ಡಿಮಾನ್ಸ್ ಆಸ್ಪತ್ರೆಗೆ ಕರೆದುಕೊಂಡು ಬಂದಾಗ ಅದೇ ದಿನ ಯಾರಿಗೂ ಏನು ಹೇಳದೆ ಕೇಳದೆ ಎಲ್ಲಿಯೂ ಹೋಗಿ ಕಾಣೆಯಾಗಿರುತ್ತಾಳೆ ಎಂದು ಧಾರವಾಡ ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಮಹಿಳೆಯ ಎತ್ತರ 5 ಪುಟ್, ಸಾಧಾರಣ ಮೈಕಟ್ಟು, ಗೋದಿ ಮೈಬಣ್ಣ, ಉದ್ದ ಮುಖ, ತಲೆಯಲ್ಲಿ ಬಿಳಿ ಮಿಶ್ರಿತ ಕಪ್ಪು ಕೂದಲು, ಹಸಿರು ಬಣ್ಣದ ಸೀರೆ ಬಿಳಿ ಬಣ್ಣದ ಬ್ಲೌಸ್ ಧರಿಸಿರುತ್ತಾಳೆ ಹಾಗೂ ಕನ್ನಡ ಭಾಗಘಯನ್ನು ಮಾತನಾಡುತ್ತಾಳೆ. ಇವರ ಸುಳಿವು ಸಿಕ್ಕವರು, ತಮ್ಮ ಠಾಣೆ ವ್ಯಾಪ್ತಿಯಲ್ಲಿ ಕಂಡು ಬಂದಲ್ಲಿ ಅಥವಾ ಏನಾದರೂ ಮಾಹಿತಿ ಲಭ್ಯವಾದಲ್ಲಿ ತಕ್ಷಣ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಂಟ್ರೋಲ್-0836-2233555/100, ಉಪನಗರ ಪೊಲೀಸ್ ಠಾಣೆ ಧಾರವಾಡ-0836-2233511/9480802033 ಹಾಗೂ ಪಾಲಕರ ಮೊ.ಸಂ.-9611088273 ಗೆ ಸಂಪರ್ಕಿಸಿಬಹುದೆಂದು ಉಪನಗರ ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.

## ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣ; ಆರೋಪಿ ಸಂತೋಷ್ ರಾವ್ ಖುಲಾಸೆ ವಿರುದ್ಧ ಸಿಬಿಐ ಮೇಲ್ಮನವಿ ಸಲ್ಲಿಕೆ

ಬೆಂಗಳೂರು: ಧರ್ಮಸ್ಥಳ ಸಮೀಪದ ಪಾಂಗಾಳದಲ್ಲಿ 2012ರಲ್ಲಿ ನಡೆದ ತೀವ್ರ ಸಂಚಲನ ಮೂಡಿಸಿದ್ದ 17 ವರ್ಷದ ವಿದ್ಯಾರ್ಥಿನಿ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಆರೋಪಿಯನ್ನು ಖುಲಾಸೆಗೊಳಿಸಿರುವುದನ್ನು ಪ್ರಶ್ನಿಸಿ ಸಿಬಿಐ ಬುಧವಾರ ಕರ್ನಾಟಕ ಹೈಕೋರ್ಟ್ಗೆ ಮೇಲ್ಮನವಿ ಸಲ್ಲಿಸಿದೆ.

ಸಿಬಿಐ ವಿಶೇಷ ನ್ಯಾಯಾಲಯವು ಜುಲೈ 16 ರಂದು ಆರೋಪಿ ಸಂತೋಷ್ ರಾವ್ ಅವರನ್ನು ಖುಲಾಸೆಗೊಳಿಸಿತ್ತು ಮತ್ತು ಪ್ರಕರಣದಲ್ಲಿ ಅವರನ್ನು ಬಂಧಿಸಿದ್ದಕ್ಕಾಗಿ ತನಿಖಾಧಿಕಾರಿ ಮತ್ತು ಪ್ರಾಸಿಕ್ಯೂಷನ್ ಅನ್ನು ತರಾಟೆಗೆ ತೆಗೆದುಕೊಂಡಿತ್ತು. ತನಿಖೆಗೆ ಅಡ್ಡಿಪಡಿಸಿದ ಪೊಲೀಸ್ ಅಧಿಕಾರಿಗಳು ಮತ್ತು ಇತರರ ವಿರುದ್ಧ ಕ್ರಮ ಕೈಗೊಳ್ಳುವಂತೆ ನ್ಯಾಯಾಲಯ ಸೂಚಿಸಿತ್ತು.

ಈ ತೀರ್ಪಿನ ನಾಲ್ಕು ತಿಂಗಳ ನಂತರ ಸಿಬಿಐ ಮೇಲ್ಮನವಿ ಸಲ್ಲಿಸಿದೆ. ತೀರ್ಪಿನ ವಿರುದ್ಧ



ಮೇಲ್ಮನವಿ ಸಲ್ಲಿಸಲು ಸಿಬಿಐಗೆ ಕೆಳ ನ್ಯಾಯಾಲಯವು 60 ದಿನಗಳ ಕಾಲಾವಕಾಶ ನೀಡಿತ್ತು.

ಸದ್ಯ ಸಿಬಿಐ ಸಲ್ಲಿಸಿರುವ ಮೇಲ್ಮನವಿಯನ್ನು ಹೈಕೋರ್ಟ್ ಅಂಗೀಕರಿಸುತ್ತದೆಯೇ ಎಂಬುದನ್ನು ಕಾದು ನೋಡಬೇಕಿದೆ ಎಂದು ತಜ್ಞರು ಹೇಳಿದ್ದಾರೆ.

ಪ್ರಕರಣದಲ್ಲಿ ಖುಲಾಸೆಗೊಂಡಿರುವ ಸಂತೋಷ್ ರಾವ್ ಅವರೇ ನಿಜವಾದ ಅಪರಾಧಿ ಎಂದು ಸಿಬಿಐ ಹೇಳಿಕೊಂಡಿದ್ದು, ಅವರ ವಿರುದ್ಧದ ಆರೋಪಗಳನ್ನು ಸಾಬೀತುಪಡಿಸಲು ಅಗತ್ಯ ಸಾಕ್ಷ್ಯಾಧಾರಗಳನ್ನು ಸಲ್ಲಿಸುವುದಾಗಿ ಹೇಳಿರುವುದಾಗಿ ಮೂಲಗಳು ತಿಳಿಸಿವೆ.

ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಹಿಂದೆ ಧರ್ಮಸ್ಥಳದ ಧರ್ಮಾಧಿಕಾರಿ ಕುಟುಂಬದವರ ಪಾತ್ರವಿದ್ದು, ನಿಜವಾದ ಆರೋಪಿಗಳನ್ನು ರಕ್ಷಿಸುವಲ್ಲಿ ಬಿಜೆಪಿ ಮುಖಂಡರೊಬ್ಬರ ಕೈವಾಡವಿದೆ ಎಂಬ ಆರೋಪಗಳು ಕೇಳಿಬಂದಿದ್ದರಿಂದ ಪ್ರಕರಣವು ರಾಜಕೀಯ ತಿರುವು ಪಡೆದುಕೊಂಡಿತ್ತು.

ಈ ಪ್ರಕರಣದ ಮರುತನಿಖೆ ಹಾಗೂ ನಿಜವಾದ ಆರೋಪಿಗಳನ್ನು ಬಂಧಿಸುವಂತೆ ಆಗ್ರಹಿಸಿ ಕರಾವಳಿ ಕರ್ನಾಟಕದಲ್ಲಿ ಜನರು ಬೃಹತ್ ಹೋರಾಟಗಳನ್ನು ನಡೆಸುತ್ತಿದ್ದಾರೆ. ಧರ್ಮಾಧಿಕಾರಿ ಕುಟುಂಬದ ಬೆಂಬಲಿಗರು ಮತ್ತು ಬಿಜೆಪಿ ರಾಜಕಾರಣಿಗಳು ಸಹ ಬೃಹತ್ ರ್ಯಾಲಿಗಳನ್ನು ನಡೆಸುತ್ತಿದ್ದು, ಇದು ಹಿಂದೂ ಯಾತ್ರಾ ಕೇಂದ್ರದ ಮೇಲಿನ ದಾಳಿ ಎಂದು ಹೇಳುತ್ತಿದ್ದಾರೆ.

ಸೌಜನ್ಯ ಪ್ರಕರಣದ ಮರುತನಿಖೆ ನಡೆಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್)ಯನ್ನು ಹೈಕೋರ್ಟ್ ಈ ಹಿಂದೆ (ಸೆಪ್ಟಂಬರ್ 9) ತಿರಸ್ಕರಿಸಿತ್ತು ಮತ್ತು ಸಂತ್ರಸ್ತ ಕುಟುಂಬವು ಆರೋಪಿಯನ್ನು ದೋಷ ಮುಕ್ತಗೊಳಿಸಿದ ವಿಚಾರಣಾಧೀನ ನ್ಯಾಯಾಲಯದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದು ಒತ್ತಿ ಹೇಳಿತ್ತು. ಆದರೆ, ಸಂತ್ರಸ್ತೆಯ ಕುಟುಂಬಸ್ಥರು ನ್ಯಾಯಾಲಯದ ಮೊರೆ ಹೋಗಿರಲಿಲ್ಲ. 2012ರ ಅಕ್ಟೋಬರ್ 10ರಂದು ದಕ್ಷಿಣ ಕನ್ನಡ ಜಿಲ್ಲೆಯ ಪ್ರಸಿದ್ಧ ಹಿಂದೂ ಯಾತ್ರಾ ಕೇಂದ್ರವಾದ ಧರ್ಮಸ್ಥಳ ಬಳಿಯ ಪಾಂಗಾಳದಲ್ಲಿ ಅಪ್ರಾಪ್ತೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣ ಬೆಳಕಿಗೆ ಬಂದಿತ್ತು. ಶ್ರೀ ಧರ್ಮಸ್ಥಳ ಮಂಜುನಾಥ ಕಾಲೇಜಿನಲ್ಲಿ 12ನೇ ವ್ಯಾಸಂಗ ಮಾಡುತ್ತಿದ್ದ 17 ವರ್ಷದ ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿ, ಕೊಲೆ ಮಾಡಲಾಗಿತ್ತು. ತರಗತಿಯನ್ನು ಮುಗಿಸಿ ಆಕೆಯ ಮನೆಯ ಕಡೆಗೆ ಹೋಗುತ್ತಿದ್ದಾಗ ಆಕೆಯನ್ನು ಅಪಹರಿಸಲಾಗಿತ್ತು ಮತ್ತು ನಂತರ ಆಕೆಯ ಮೃತದೇಹವು ವಿವಸ್ತ್ರಗೊಂಡ ಸ್ಥಿತಿಯಲ್ಲಿ ಪತ್ತೆಯಾಗಿತ್ತು.

## ನೈಜೀರಿಯ ದರೋಡೆಕೋರರಿಂದ ದಾಳಿ; 13 ವಿದ್ಯಾರ್ಥಿಗಳ ಹತ್ಯೆ



ಕಾನೊ: ನೈಜೀರಿಯಾದ ಕತ್ಸಿನಾ ರಾಜ್ಯದ ಮದ್ರಸವೊಂದರಲ್ಲಿ ರವಿವಾರ ನಡೆದ ಧಾರ್ಮಿಕ ಕಾರ್ಯಕ್ರಮವೊಂದರ ವೇಳೆ ಬಂದೂಕುಧಾರಿಗಳ ತಂಡವೊಂದು ನುಗ್ಗಿ 13 ಮಂದಿ ವಿದ್ಯಾರ್ಥಿಗಳನ್ನು ಹತ್ಯೆಗೈದ ಧಾರುಣ ಘಟನೆ ನಡೆದಿದೆ.

ಮುಸಾವಾ ಜಿಲ್ಲೆಯ ಗ್ರಾಮವೊಂದಕ್ಕೆ ರವಿವಾರ ಮೋಟಾರ್ ಸೈಕಲ್ಗಳಲ್ಲಿ ಆಗಮಿಸಿದ ಹಲವಾರು ಢಕಾಯಿತರು, ಧಾರ್ಮಿಕ ಕೇಂದ್ರದಲ್ಲಿ ಮೌಲೂದ್ ಪಾರಾಯಣ ನಡೆಸುತ್ತಿದ್ದ ಶಾಲಾ ಮಕ್ಕಳ ಮೇಲೆ ಗುಂಡು ಹಾರಿಸಿದ್ದಾರೆಂದು ಜಿಲ್ಲಾ ಆಡಳಿತಾಧಿಕಾರಿ ಹಬೀಬ್ ಅಬ್ದುಲ್ ಖಾದಿರ್ ತಿಳಿಸಿದ್ದಾರೆ.

ದಾಳಿಯಲ್ಲಿ 13 ಮಂದಿ ಮಕ್ಕಳು ಸ್ಥಳದಲ್ಲೇ ಮೃತಪಟ್ಟಿದ್ದು, ಇತರ 20 ಮಂದಿ ಗಾಯಗೊಂಡಿದ್ದಾರೆಂದು ಅವರು ಹೇಳಿದ್ದಾರೆ.

ಈಶಾನ್ಯ ನೈಜೀರಿಯಾದ ರಾಜ್ಯವಾದ ಕತ್ಸಿನಾ, ಢಕಾಯಿತರ ಹಾವಳಿಗಳಿಂದ ಪೀಡಿತವಾಗಿದೆ. ಈ ರಾಜ್ಯದಲ್ಲಿ ದರೋಡೆಕೋರ ತಂಡಗಳು ಹಳ್ಳಿಗಳ ಮೇಲೆ ದಾಳಿ ನಡೆಸಿ, ನಿವಾಸಿಗಳನ್ನು ಹತ್ಯೆಗೈಯುತ್ತವೆ ಇಲ್ಲವೇ ಅಪಹರಿಸುತ್ತವೆ. ಕೊಳ್ಳೆ ಹೊಡೆದ ಬಳಿಕ ಅವು ಮನೆಗಳಿಗೆ ಬೆಂಕಿ ಹಚ್ಚಿ ಪರಾರಿಯಾಗುತ್ತವೆ.

## ಲುಫ್ತಾನ್ಸ ವಿಮಾನದಲ್ಲಿ ಸಹ ಪ್ರಯಾಣಿಕರಿಗೆ ಲೈಂಗಿಕ ಕಿರುಕುಳ: ವೃದ್ಧನ ಬಂಧನ




ಬೆಂಗಳೂರು: ಫ್ರಾಂಕ್ಫರ್ಟ್-ಬೆಂಗಳೂರು ನಡುವೆ ಹಾರಾಟ ನಡೆಸುತ್ತಿದ್ದ ಲುಫ್ತಾನ್ಸ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ಮಹಿಳಾ ಪ್ರಯಾಣಿಕರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ 52 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನವೆಂಬರ್ 6 ರಂದು ಈ ಘಟನೆ ನಡೆದಿದೆ. ಆಂಧ್ರಪ್ರದೇಶದ ತಿರುಪತಿ ಮೂಲದ 32 ವರ್ಷದ ಮಹಿಳೆ ಮಲಗಿದ್ದಾಗ ಆಕೆಯ ಪಕ್ಕದಲ್ಲಿ ಕುಳಿತಿದ್ದ ವ್ಯಕ್ತಿ ಆಕೆಯ ಖಾಸಗಿ ಅಂಗಗಳನ್ನು ಮುಟ್ಟಿ ಅಸಭ್ಯವಾಗಿ ವರ್ತಿಸಿದ್ದಾನೆ ಎಂದು ಆರೋಪಿಸಿದ್ದಾರೆ. ಘಟನೆ ನಂತರ, ಮಹಿಳೆ ಫ್ಲೈಟ್ ಅಟೆಂಡೆಂಟ್ಗೆ ವಿಷಯವನ್ನು ತಿಳಿಸಿದ್ದರು. ಹೀಗಾಗಿ ಪ್ರಯಾಣದ ವೇಳೆ ಆಕೆಯ ಸೀಟನ್ನು ಬದಲಾಯಿಸಿದ್ದರು. ವಿಮಾನ ಬೆಂಗಳೂರಿನಲ್ಲಿ ಇಳಿದ ನಂತರ ಮಹಿಳೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಭಾರತೀಯ ದಂಡ ಸಂಹಿತೆಯ ಸೆಕ್ಷನ್ 354 ಎ (ಲೈಂಗಿಕ ಕಿರುಕುಳ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ಘಟನೆ ಸಂಬಂಧ ವ್ಯಕ್ತಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು.

## ವಿಮೆ ಹಣ ನಿರಾಕರಿಸಿದ ವಿಮಾ ಕಂಪನಿಗೆ ರೂ. 2 ಲಕ್ಷ 40 ಸಾವಿರ ದಂಡ ವಿಧಿಸಿ, ದೂರುದಾರರಿಗೆ ಪರಿಹಾರ ನೀಡಲು ಆದೇಶ

ಧಾರವಾಡ: ಗದಗ ಜಿಲ್ಲೆಯ ನರಗುಂದದ ಸುನೀಲ ದೋಂಗಡಿ ಅನ್ನುವವರು ಬುಲೆರೋ ಪಿಕ್ಅಪ್ ವಾಹನ ನಂ.ಕೆಎ-26-ಎ-4181 ಗೆ ಮಾಲೀಕರಾಗಿದ್ದರು. ಅವರು ಸದರಿ ವಾಹನಕ್ಕೆ ಹುಬ್ಬಳ್ಳಿಯ ವಿದ್ಯಾನಗರದ ಎಚ್.ಡಿ.ಎಫ್.ಸಿ.ಇರಗೋ ಜನರಲ್ ಇನ್ಸುರೆನ್ಸ್ ಕಂಪನಿಯಿಂದ ವಿಮೆ ಮಾಡಿಸಿದ್ದರು. ಆ ವಿಮೆ ಚಾಲ್ತಿಯಿರುವಾಗ ದಿ:27/09/2019 ರಂದು ಆ ವಾಹನ ನರಗುಂದದ ಹಿರೇಹಳ್ಳ ಹತ್ತಿರ ಅಪಘಾತಕ್ಕೀಡಾಗಿ ಜಖಂಗೊಂಡಿತ್ತು. ಆ ವಾಹನದ ರಿಪೇರಿಗಾಗಿ ರೂ.2,04,967/- ಆಗುತ್ತದೆ ಅಂತಾ ಅಧಿಕೃತ ಸರ್ವಿಸ್ ಸೆಂಟರನಿಂದ ಎಸ್ಟಿಮೇಷನ್ ಪಡೆದು ಆ ಮೊತ್ತದ ಹಣ ಪರಿಹಾರವಾಗಿ ಕೊಡುವಂತೆ ಎದುರುದಾರ ವಿಮಾ ಕಂಪನಿಯವರಿಗೆ ಎಲ್ಲ ದಾಖಲೆಗಳ ಸಮೇತ ಕೋರಿಕೊಂಡಿದ್ದರು.

ಅಪಘಾತ ಕಾಲಕ್ಕೆ ಆ ವಾಹನಕ್ಕೆ ಫಿಟನೆಸ್ ಸರ್ಟಿಪಿಕೇಟ್ ಇಲ್ಲ ಅನ್ನುವ ಕಾರಣ ನೀಡಿ ವಿಮಾ ಕಂಪನಿಯವರು ದೂರುದಾರರ ಕ್ಲೇಮನ್ನು ತಿರಸ್ಕರಿಸಿದ್ದರು. ಅಪಘಾತವಾದ ನಂತರ ಆ ವಾಹನದ ಫಿಟನೆಸ ಸರ್ಟಿಪಿಕೇಟನ್ನು ದೂರುದಾರ ನವೀಕರಿಸಿ ಕ್ಲೇಮ್ ಅರ್ಜಿ ಸಲ್ಲಿಸಿದ್ದರೂ ವಿಮಾ ಕಂಪನಿಯವರು ಅವರ ಕ್ಲೇಮನ್ನು ಒಪ್ಪಲಿಲ್ಲ. ಅಂತಹ ವಿಮಾ ಕಂಪನಿಯವರ ನಡವಳಿಕೆ ಗ್ರಾಹಕರ ರಕ್ಷಣಾಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ವಿಮಾ ಕಂಪನಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ದಿ:07/03/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಅಪಘಾತ ಕಾಲಕ್ಕೆ ಆ ವಾಹನಕ್ಕೆ ಅರ್ಹತಾ ಪತ್ರ ಇರಲಿಲ್ಲವಾದ್ದರಿಂದ ದೂರುದಾರ ಕ್ಲೇಮ ಪಡೆಯಲು ಅರ್ಹರಲ್ಲ ಅಂತಾ ಹೇಳಿ ಅವರ ದೂರನ್ನು ವಜಾ ಮಾಡುವಂತೆ ವಿಮಾ ಕಂಪನಿಯವರು ಆಕ್ಷೇಪಣೆ ಎತ್ತಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ.ಭೂತೆ, ಸದಸ್ಯರುಗಳಾದ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ. ಹಿರೇಮಠ ಅವರು ವಾಹನದ ಮೇಲೆ ವಿಮೆ ಚಾಲ್ತಿಯಿದೆ ಮತ್ತು ಆ ವಾಹನ ಅಪಘಾತದಲ್ಲಿ ಜಖಂಗೊಂಡು ಹುಬ್ಬಳ್ಳಿಯ ಸುತಾರಿಯಾ ಅಟೋ ಸೆಂಟರನಲ್ಲಿ ದುರಸ್ತಿಯಾಗಿದೆ.

ರಿಪೇರಿ ಮಾಡಿಸಲು ರೂ.2,04,967/- ಖರ್ಚು ಮಾಡಿದ್ದಾರೆ. ಅಪಘಾತವಾದ ನಂತರ ದೂರುದಾರ ಗದಗ ಆರ್ಟಿ.ಓ. ಕಛೇರಿಯಿಂದ ಅರ್ಹತಾ ಪತ್ರ ನವೀಕರಿಸಿರುವುದರಿಂದ ಕರ್ನಾಟಕ ಹೈ ಕೋರ್ಟ್ ತೀರ್ಪಿನನ್ವಯ ಅಪಘಾತ ಕಾಲಕ್ಕೆ ಆ ವಾಹನಕ್ಕೆ ಅರ್ಹತಾ ಪತ್ರ ಇತ್ತು ಅಂತಾ ಪರಿಗಣಿಸಬೇಕಾಗುತ್ತದೆ. ಕಾರಣ ವಿಮಾ ಷರತ್ತಿನ ನಿಯಮದಂತೆ ವಾಹನ ದುರಸ್ತಿಗೆ ತಗುಲಿದ ವೆಚ್ಚವನ್ನು ಕೊಡುವುದು ವಿಮಾ ಕಂಪನಿಯವರ ಕರ್ತವ್ಯವಾಗಿದೆ.

ಆ ರೀತಿ ವಿಮೆ ಹಣ ನೀಡಲು ಎದುರುದಾರ ವಿಮಾಕಂಪನಿಯವರು ನಿರಾಕರಿಸಿರುವುದರಿಂದ ಅಂತಹ ಅವರ ನಡಾವಳಿಕೆ ಗ್ರಾಹಕರ ರಕ್ಷಣಾಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಆಯೋಗ ಅಭಿಪ್ರಾಯಪಟ್ಟು ತೀಪು ನೀಡಿದೆ.

ವಾಹನದ ದುರಸ್ತಿ ವೆಚ್ಚ ರೂ.2,05,000/- ಹಾಗೂ ಅದರ ಮೇಲೆ ಕ್ಲೇಮ ತಿರಸ್ಕರಿಸಿದ ದಿನಾಂಕದಿಂದ ಶೇ.8 ರಂತೆ ಬಡ್ಡಿ ಲೆಕ್ಕ ಹಾಕಿ ದೂರುದಾರನಿಗೆ ತೀಪು ನೀಡಿದ ಒಂದು ತಿಂಗಳ ಒಳಗಾಗಿ ಹಣ ಸಂದಾಯ ಮಾಡುವಂತೆ ವಿಮಾ ಕಂಪನಿಗೆ ಆಯೋಗ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ತೊಂದರೆಗಾಗಿ ರೂ.25,000/- ಪರಿಹಾರ ಹಾಗೂ ಪ್ರಕರಣದ ಖರ್ಚು ವೆಚ್ಚ ರೂ.10,000/- ನೀಡುವಂತೆ ವಿಮಾ ಕಂಪನಿಗೆ ಆಯೋಗ ನಿರ್ದೇಶಿಸಿದೆ.

# ಬ್ಯಾಂಕ್ ಅಧಿಕಾರಿಗಳು ಸಂವೇದನಾಶೀಲರಾಗಿ ವರ್ತಿಸಬೇಕು; ಬರಗಾಲ ಘೋಷಣೆ ಆಗಿರುವುದರಿಂದ ಕಾಲಮಿತಿಯಲ್ಲಿ ರೈತರ ಬೆಳೆ ಸಾಲಗಳು ಪುನರ್ ರಚನೆ ಆಗಬೇಕು: ಜಿಲ್ಲಾಧಿಕಾರಿ ಗುರುದತ್ತ ಹೆಗಡೆ

ಧಾರವಾಡ: ಸರ್ಕಾರ ಇಡೀ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿದೆ. ರೈತರ ಬೆಳೆಸಾಲವನ್ನು ಕಾಲಮಿತಿಯಲ್ಲಿ ಪುನರ್ ರಚಿಸಬೇಕು. ಸರಕಾರ ರೈತರಿಗೆ ಸಾಲ ತುಂಬುವಂತೆ ಒತ್ತಾಯಿಸಿ, ಯಾವುದೇ ನೋಟಿಸ್ ನೀಡದಂತೆ ಸೂಚಿಸಿದೆ. ಮತ್ತು ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯು ಎಲ್ಲ ಬ್ಯಾಂಕ್ಗಳಿಗೆ ತಿಳಿಸಿದೆ. ಆದರೂ ಕೆಲವು ಬ್ಯಾಂಕ್ ಮ್ಯಾನೇಜರ್ ಅವರು ರೈತರಿಗೆ ನೋಟೀಸ್ ನೀಡುತ್ತಿರುವುದು ಕಂಡು ಬಂದಿದೆ. ಅಂತಹ ಬ್ಯಾಂಕುಗಳ ಕುರಿತು ಸರಕಾರಕ್ಕೆ ವರದಿ ಸಲ್ಲಿಸಿ, ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಎಚ್ಚರಿಸಿದರು.

ಅವರು ಇಂದು (ನ.08) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಬ್ಯಾಂಕರ್ಸ್ಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ ಸಭೆ ಮತ್ತು ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

ಸರಕಾರದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಇಲಾಖೆ ಶಿಪಾರಸ್ಸು ಬಂದ ತಕ್ಷಣ ವಿಳಂಬವಿಲ್ಲದೆ ಸಾಲ ಮಂಜೂರಿ ಆಗಬೇಕು. ಪ್ರತಿ ಬ್ಯಾಂಕ್ಗಳಿಗೆ ನೀಡಿದ ಗುರಿಯ ಪ್ರಗತಿಯನ್ನು ಪ್ರತಿಯೊಬ್ಬರು ಸಾಧಿಸಬೇಕು ಎಂದು ಅವರು ಹೇಳಿದರು.

ಕೇಂದ್ರ ಸರಕಾರದ ಯೋಜನೆಗಳ ಅನುಗಣ್ಣನದಲ್ಲಿ ನಿಧಾನ ಮಾಡಬಾರದು. ಸರಕಾರದ ಸಾಲ ಸೌಲಭ್ಯ, ಸಹಾಯಧನ ಫಲಾನುಭವಿಗಳಿಗೆ ಸಕಾಲದಲ್ಲಿ ಸಿಗುವಂತೆ ಮಾಡುವುದು ಎಲ್ಲ ಬ್ಯಾಂಕ್ ವ್ಯಸ್ಥಾಪಕರ ಜವಾಬ್ದಾರಿ ಆಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಕೆವಿಜಿಬಿ ಬ್ಯಾಂಕ್ ಶಾಖೆಗಳು ಹೆಚ್ಚಾಗಿವೆ. ಸಿಡಿ ರೇಶಿಯೋ ಪ್ರಮಾಣ ಶೇ.44 ರಷ್ಟಿದೆ. ಇದು ಅತ್ಯಂತ ಕಡಿಮೆ ಇದ್ದು, ಜಿಲ್ಲಾ




ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರು ಕೆವಿಜಿಬಿ ಬ್ಯಾಂಕ್ ಹಿರಿಯ ಅಧಿಕಾರಿಗಳ, ಶಾಖಾ ವ್ಯವಸ್ಥಾಪಕರ ಪ್ರತ್ಯೇಕ ಸಭೆ ಜರುಗಿಸಿ, ಈ ಕುರಿತು ಪ್ರಗತಿಗಾಗಿ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ನಿರ್ದೇಶಿಸಿದರು.

ಜಿಲ್ಲೆಯಲ್ಲಿ ಬರಗಾಲ ಇರುವುದರಿಂದ ಬ್ಯಾಂಕ್ ಅಧಿಕಾರಿಗಳು ಸಾರ್ವಜನಿಕರೊಂದಿಗೆ ಸಹನೆ ಮತ್ತು ಕಾಳಜಿಯಿಂದ ವರ್ತಿಸಬೇಕು. ಸಾಲ ವಸೂಲಾತಿ, ಹೊಸ ಸಾಲ ವಿತರಣೆ, ಸಬ್ಸಿಡಿ, ಪರಿಹಾರ ಹಣ ಜಮೆ ಸೇರಿದಂತೆ ವಿವಿಧ ಕಾರ್ಯಚಟುವಟಿಕೆಗಳ ಕುರಿತು ಕಾಲಕಾಲಕ್ಕೆ ಸರಕಾರ, ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಮತ್ತು ಜಿಲ್ಲಾ ಬ್ಯಾಂಕರ್ಸ್ ಸಲಹಾ ಸಮಿತಿ ನೀಡುವ ಸಲಹೆ, ಮಾರ್ಗಸೂಚಿಗಳನ್ನು ಜಿಲ್ಕೆಯ ಎಲ್ಲ ಬ್ಯಾಂಕ್ ಶಾಖೆಗಳು ಪಾಲಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಪ್ರಭೂದೇವ್ ಎನ್.ಜಿ. ಅವರು ಮಾತನಾಡಿ, ಜಿಲ್ಲೆಯ ಎಲ್ಲ ಬ್ಯಾಂಕ್ಗಳು ಗುರಿಗೆ ಅನುಗುಣವಾಗಿ ಕೆಲಸ ಮಾಡುತ್ತಿವೆ. ಸಬ್ಸಿಡಿ ಹಣವನ್ನು ಸಂಭಂಧಿಸಿದ ಫಲಾನುಭವಿಗಳ ಖಾತೆಗೆ ಬಿಡುಗಡೆಯಾದ ತಕ್ಷಣ ಜಮೆ ಮಾಡಬೇಕೆಂದು ಹೇಳಿದರು.

ನಬಾರ್ಡ್ ಡಿಡಿಎಂ ಮಯೂರ ಕಾಂಬಳೆ ಅವರು ಮಾತನಾಡಿ, 2023-24 ರಲ್ಲಿನ ಪಿಎಲ್.ಪಿಯ ರೂ. 14,400 ಕೋಟಿ.ಗಳ ಗುರಿಯನ್ನು ಸೆಪ್ಟೆಂಬರ್ 2023 ರವರೆಗೆ ರೂ.6,642 ರಷ್ಟು ಸಾಧಿಸಲಾಗಿದೆ. 2024-25 ನೇ ಸಾಲಿಗೆ ರೂ.14,557 ಕೋಟಿಗಳ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದರು.

ರಿಸರ್ವ ಬ್ಯಾಂಕ್ ಪ್ರತಿನಿಧಿ ಈಲ್ಲಾ ಸಾಹೂ ಅವರು ಮಾತನಾಡಿ, ರೈತರ ಬೇಳೆಸಾಲವನ್ನು ಆದಷ್ಟು ಬೇಗ ಕೃಷಿ ಸಾಲ ಪುನರ್ ರಚನೆ ಮಾಡಿ, ಬರಗಾಲದ ಸೌಲಭ್ಯಗಳನ್ನು ಕೃಷಿಕರಿಗೆ ತಲುಪಿಸಬೇಕು ಎಂದು ಅವರು ಹೇಳಿದರು. ಬ್ಯಾಂಕ್ ಆಪ್ ಬರೋಡಾ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಶ್ರೀಹರಿ ವೇದಿಕೆಯಲ್ಲಿ ಇದ್ದರು.

ಸಭೆಯಲ್ಲಿ ಧಾರವಾಡ ಜಿಲ್ಲಾ ನಬಾರ್ಡ್ ರೂಪಿಸಿರುವ 2024-25 ನೇ ಸಾಲಿನ ಪೊಟೆನಶಲ್ ಲಿಂಕಡ್ ಕ್ರೆಡಿಟ್ ಪ್ಲಾನ್ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲೆಯ ವಿವಿಧ ಬ್ಯಾಂಕ್ಗಳ ಮುಖ್ಯಸ್ಥರು, ವಿವಿಧ ನಿಗಮ, ಮಂಡಳಿ, ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ನಗರಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಭಾಗವಹಿಸಿದ್ದರು.

# ದೀಪಾವಳಿ ಹಬ್ಬ: ಹಸಿರು ಪಟಾಕಿ ಬಳಕೆಗೆ ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ಸಾರ್ವಜನಿಕರ ಹಿತದೃಷ್ಟಿಯಿಂದ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಮಾರಾಟ ಮತ್ತು ಬಳಕೆ ನಿಯಂತ್ರಿಸುವ ಕುರಿತು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಹಸಿರು ಪಟಾಕಿಗಳನ್ನು ಹೊರತುಪಡಿಸಿ ಉಳಿದ ಯಾವುದೇ ಇತರ ಪಟಾಕಿಗಳ ಹಾಗೂ ಮಾರಾಟ ಬಳಕೆಯನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.



ವಿವಿಧ ರೀತಿಯ ಪಟಾಕಿಗಳ ಸಿಡಿತದಿಂದ ಉಂಟಾಗುವ ಶಬ್ದ ಹಾಗೂ ವಾಯು ಮಾಲಿನ್ಯವನ್ನು ನಿಯಂತ್ರಿಸಲು, ಸಾರ್ವಜನಿಕ ಆಸ್ತಿ ಹಾಗೂ ಆರೋಗ್ಯ ಸಂರಕ್ಷಣೆಯ ಹಿತದೃಷ್ಟಿಯಿಂದ ಹಸಿರು ಪಟಾಕಿಗಳನ್ನು ಮಾತ್ರ ಬಳಸಬೇಕು.

ಹಸಿರು ಪಟಾಕಿಗಳ ಮೇಲೆ ಹಾಗೂ ಅವುಗಳ ಪ್ಯಾಕೇಟ್ ಮೇಲೆ ಹಸಿರು ಪಟಾಕಿಯ ಚಿಹ್ನೆ ಹಾಗೂ ಕ್ಯೂಆರ್ ಆರ್ ಕೋಡ್ ಸಹ ಇರುತ್ತದೆ. ಚಿಹ್ನೆ ಇಲ್ಲದ ಯಾವುದೇ ಪಟಾಕಿ ಹಸಿರು ಪಟಾಕಿ ಅನಿಸುವುದಿಲ್ಲ ಮತ್ತು ಅವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ರಾತ್ರಿ 8 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಲಾಗಿದ್ದು, ಉಳಿದ ಸಮಯದಲ್ಲಿ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.


ಅದೇ ರೀತಿಯಲ್ಲಿ ಪಟಾಕಿಗಳು, ಸಿಡಿಯುವ ಜಾಗದಿಂದ 4 ಮೀಟರ ದೂರದಲ್ಲಿ 125 ಡೆಸಿಬಲ್‌ಗಳಿಗಿಂತ (AI) ಅಥವಾ 145 ಡೆಸಿಬಲ್ (C) PK ಗಿಂತ ಅಧಿಕ ಶಬ್ದ ಉಂಟು ಮಾಡುವ ಪಟಾಕಿಗಳ ತಯಾರಿಕೆ ಮಾರಾಟ ಹಾಗೂ ಬಳಕೆ ಮಾಡುವುದನ್ನು ಕೂಡ ನಿಷೇಧಿಸಲಾಗಿದೆ.

ದಿನದ ಯಾವುದೇ ಸಮಯದಲ್ಲಿ ನಿಶ್ಯಬ್ದ ವಲಯಗಳೆಂದು ಘೋಷಿಸಲ್ಪಟ್ಟ ಸ್ಥಳಗಳ (ಆಸ್ಪತ್ರೆ ಶಾಲೆ, ಪ್ರಾರ್ಥನಾ ಮಂದಿರ ಇತ್ಯಾದಿಗಳು) ಸುತ್ತಮುತ್ತ ಯಾವುದೇ ರೀತಿಯ ಶಬ್ದ ಉಂಟುಮಾಡುವ ಪಟಾಕಿ ಹಾಗೂ ಸಿಡಿಮದ್ದುಗಳ ಬಳಕೆ ಮಾಡಬಾರದು.

ಒಂದುವೇಳೆ ಸದರಿ ಕ್ರಮಗಳು ಉಲ್ಲಂಘಿನೆಯಾಗಿರುವುದು ಕಂಡು ಬಂದಲ್ಲಿ ಅದಕ್ಕೆ ಕಾರಣರಾದವರ ಮೇಲೆ ಕಾಯ್ದೆ ಅನುಸಾರ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲಾಗುವುದು. ಈ ನಿಟ್ಟಿನಲ್ಲಿ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಯಂತ್ರಣ ತಪ್ಪಿದ ಕಾರು: ಐವರು ಜಲಸಮಾಧಿ

ಮಂಡ್ಯ: ಚಾಲಕನ ನಿಯಂತ್ರಣ ತಪ್ಪಿ ಕಾರು ನಾಲೆಗೆ ಬಿದ್ದ ಪರಿಣಾಮ ಐವರು ಜಲಸಮಾಧಿ ಆಗಿರುವ ಘಟನೆ ಮಂಡ್ಯದಲ್ಲಿ ಜಿಲ್ಲೆಯ ಪಾಂಡವಪುರ ತಾಲೂಕಿನ ಬನಘಟ್ಟ ಬಳಿಯ ವಿಸಿ ನಾಲೆಯಲ್ಲಿ ದುರ್ಘಟನೆ ಸಂಭವಿಸಿದೆ. ಭದ್ರಾವತಿ ನಿವಾಸಿಗಳಾದ ಚಂದ್ರಪ್ಪ (61), ಕೃಷ್ಣಪ್ಪ (60), ಧನಂಜಯ (55), ಬಾಬು ಹಾಗೂ ಜಯಣ್ಣ ಸಾವನ್ನಪ್ಪಿದ್ದಾರೆ. ಮೃತರು ಇಂಡಿಕಾ ಕಾರಿನಲ್ಲಿ ಮೈಸೂರಿನಿಂದ ಭದ್ರಾವತಿ ಕಡೆಗೆ ಪ್ರಯಾಣ ಬೆಳೆಸಿದ್ದರು. ಬನಘಟ್ಟದ ವಿಸಿ ನಾಲೆ ಸೇತುವೆ ಬಳಿ ಬರುತ್ತಿದ್ದಂತೆ ನಿಯಂತ್ರಣ



ತಪ್ಪಿದ ಕಾರು ನೇರವಾಗಿ ನಾಲೆಗೆ ಉರುಳಿಬಿದ್ದಿದೆ.

ಕಿರಿದಾದ ರಸ್ತೆ ಹಾಗೂ ತಿರುವಿದ್ದ ಕಾರಣ ಚಾಲಕ ಕೂಡ ಕಾರು ನಿಯಂತ್ರಿಸಲು ಸಾಧ್ಯವಾಗಿಲ್ಲ. ಅಲ್ಲದೇ ಕೆಆರ್‌ಎಸ್ ಅಣೆಕಟ್ಟಿನಿಂದ ನಾಲೆಗೆ ನೀರು ಬಿಟ್ಟಿರುವುದರಿಂದ ನಾಲೆಯಲ್ಲಿ ನೀರಿನ ಹರಿವು ಹೆಚ್ಚಾಗಿತ್ತು. ಪ್ರತ್ಯಕ್ಷದರ್ಶಿಗಳ ಮಾಹಿತಿ ಮೇರೆಗೆ ತಕ್ಷಣ ಸ್ಥಳಕ್ಕೆ ಆಗಮಿಸಿದ ಪೊಲೀಸ್ ಹಾಗೂ ಅಗ್ನಿಶಾಮಕ ಸಿಬ್ಬಂದಿ ಸ್ಥಳೀಯ ಈಜುಗಾರರ ನೆರವಿನಿಂದ ಕಾರು ಹೊರತೆಗೆದಿದ್ದಾರೆ.

ಕಾರು ಹೊರ ತೆಗೆಯುವ ಸಂದರ್ಭ ಮೃತನೋರ್ವನ ಮೊಬೈಲ್ ರಿಂಗ್ ಆಗಿದ್ದು, ಕರೆ ಸ್ವೀಕರಿಸಿದ ಸಿಬ್ಬಂದಿ ಕುಟುಂಬಸ್ಥರಿಗೆ ಮಾಹಿತಿ ಮುಟ್ಟಿಸಿದ್ದಾರೆ. ಬಳಿಕ ಮೃತದೇಹಗಳನ್ನು ಪಾಂಡವಪುರ ತಾಲೂಕು ಆಸ್ಪತ್ರೆ ಶವಗಾರಕ್ಕೆ ರವಾನಿಸಿಲಾಗಿದೆ. ಶವಗಾರದ ಬಳಿ ಆಗಮಿಸಿದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

## ರಾಷ್ಟ್ರೀಯ ಆಯುರ್ವೇದ ದಿನ – 2023 ನಿಮಿತ್ಯ ಬೃಹತ್ ಉಚಿತ ತಪಾಸಣೆ ಶಿಬಿರ

ಬೆಳಗಾವಿ: ಕೆ.ಎಲ್.ಇ. ಆಯುರ್ವೇದ ಆಸ್ಪತ್ರೆ ಶಹಾಪೂರ ಬೆಳಗಾವಿಯಲ್ಲಿ ರಾಷ್ಟ್ರೀಯ ಆಯುರ್ವೇದ ದಿನ –2023 ರ ನಿಮಿತ್ಯ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸುತ್ತಿದೆ. ಈ ನಿಟ್ಟಿನಲ್ಲಿ ಎಲ್ಲಾ OPD ಗಳು / ವಿಶೇಷ ಘಟಕಗಳಲ್ಲಿ ಉಚಿತ ತಪಾಸಣೆ ಯನ್ನು ದಿನಾಂಕ: 10/11/2023 ರಂದು ಮುಂಜಾನೆ 09.00 ರಿಂದ 1.30 ರವರೆಗೆ ಹಾಗೂ ಮಧ್ಯಾನ್ಹ 02.30 ರಿಂದ 05.00 ರವರೆಗೆ ಕೈಗೊಳ್ಳಲಾಗುತ್ತಿದೆ.

ಶಿಬಿರದಲ್ಲಿ ನರ ವೈಜ್ಞಾನಿಕ ಅಸ್ವಸ್ಥತೆಗಳು, ಪುರುಷ ಮತ್ತು ಸ್ತ್ರೀಬಂಜೆತನ, ಕಣ್ಣು, ಇಎನ್‌ಟಿ, ಚರ್ಮರೋಗ, ಪೈಲ್ಸ್, ಸ್ತ್ರೀರೋಗ ಸಮಸ್ಯೆಗಳು, ಮಕ್ಕಳ ಆರೋಗ್ಯ ಸಮಸ್ಯೆಗಳು, ಮಾನಸಿಕ ಅಸ್ವಸ್ಥತೆಗಳು ಥೈರಾಯ್ಡ್, ಮಧುಮೇಹ, ಹೃದ್ರೋಗ, ಲೈಂಗಿಕ ಸಮಸ್ಯೆಗಳು, ವಯೋ ಸಹಜ ಸಮಸ್ಯೆಗಳು ಮುಂತಾದ ವಿವಿಧರೋಗಗಳು ಇತ್ಯಾದಿಗಳಿಗೆ ಸಂಬಂಧಿಸಿದಂತೆ ತಪಾಸಣೆ ಮಾಡಲಾಗುವುದು.

ಡಾ.ಬಿ ಗುರುಬಸವರಾಜ ಹಿರಿಯ ವೈದ್ಯ ಮತ್ತು ಮಧುಮೇಹ ನಿರ್ವಹಣೆಯ ತಜ್ಞ ಮೈಸೂರು ಮಧುಮೇಹ ಕಾಯಿಲೆ ರೋಗಿಗಳನ್ನು ಪರೀಕ್ಷಿಸಿ ಸಲಹೆಗಳನ್ನು ನೀಡಲಿದ್ದಾರೆ.

ಸಾರ್ವಜನಿಕರು ಈ ಶಿಬಿರದ ಲಾಭಪಡೆಯಬೇಕೆಂದು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಪ್ರಕಟಣೆಯಲ್ಲಿ ವಿನಂತಿಸಿ ಕೊಡಿದ್ದಾರೆ.

## 9 ರಂದು ಲಿಂಗರಾಜ ಬಿಬಿಎ ಕಾಲೇಜಿನಲ್ಲಿ ಅಂತರ್ ಕಾಲೇಜುಗಳ ವಿವಿಧ ಸ್ಪರ್ಧೆಗಳು

ಬೆಳಗಾವಿ: ಕೆಎಲ್‌ಇ ಸೊಸೈಟಿಯ ಕಾಲೇಜ್ ಆಫ್ ಬ್ಯುಸಿನೆಸ್ ಅಡ್ಮಿನಿಸ್ಟ್ರೇಷನ್, ಲಿಂಗರಾಜ್ ಕಾಲೇಜು (ಸಿಬಿಎಎಲ್‌ಸಿ) ಉತ್ತರ ಕರ್ನಾಟಕದ ಪಿಯು ವಿದ್ಯಾರ್ಥಿಗಳಿಗೆ ಇಂಟರ್ ಕಾಲೇಜು ಕಾರ್ಯಕ್ರಮವನ್ನು ಆಯೋಜಿಸುತ್ತಿದೆ. ಉತ್ತರ ಕರ್ನಾಟಕದ 40 ಕ್ಕೂ ಹೆಚ್ಚು ಪಿಯು ಕಾಲೇಜುಗಳಿಂದ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ನವೆಂಬರ್ 9 ಮತ್ತು 10, 2023 ರಂದು 40 ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದಾರೆ.

ಚರ್ಚಾ ಸ್ಪರ್ಧೆ, ರಸಪ್ರಶ್ನೆ, ಕವನ, ಸ್ಟ್ಯಾಂಡ್-ಅಪ್ ಕಾಮಿಡಿ ಮತ್ತು ಸ್ಟೋರಿಟೆಲ್ಲಿಂಗ್, ಅತ್ಯುತ್ತಮ ನಿರ್ವಾಹಕ, ಮಾರ್ಕ್-ಸ್ಟಾಕ್, ಜಾಹೀರಾತು ಮತ್ತು ವೀಕ್ಷಣೆ ಯಂತಹ ಮ್ಯಾನೇಜ್‌ಮೆಂಟ್ ಈವೆಂಟ್‌ಗಳು, ಫ್ಯಾಶನ್ ಶೋ, ಡ್ಯಾನ್ಸ್, ಸಿಂಗಿಂಗ್, ಸ್ಟ್ರೀಟ್ ಪ್ಲೇ, ಮೈಮ್ ಮತ್ತು ಮಿಮಿಕ್ರಿ, ಲಲಿತಕಲೆಯಂತಹ ವಿವಿಧ ಸಾಹಿತ್ಯಕ ಕಾರ್ಯಕ್ರಮಗಳು ಪಿಯು ವಿದ್ಯಾರ್ಥಿಗಳಿಗೆ ಸ್ಕೆಚಿಂಗ್, ಫೇಸ್ ಪೇಂಟಿಂಗ್, ರಂಗೋಲಿ ಮತ್ತುಕ್ಲೇ ಮಾಡೆಲಿಂಗ್, ರೀಲ್ ಮೇಕಿಂಗ್, ಗೇಮಿಂಗ್, ಮೆಮೆ ಮತ್ತು ಲೋಗೋದಂತಹ ಡಿಜಿಟಲ್ ಈವೆಂಟ್‌ಗಳನ್ನು ನಡೆಸಲಾಗುತ್ತಿದೆ. ಇವುಗಳ ಜೊತೆಗೆ ಅಡುಗೆ ಛಾಯಾಗ್ರಹಣ ಮತ್ತು ಕಿರುಚಿತ್ರ ನಿರ್ಮಾಣ ಕಾರ್ಯಕ್ರಮಗಳೂ ಇವೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಟೀಟೋಸ್ಟ್ ಕಂಪನಿಯ ಸಂಸ್ಥಾಪಕ ಶ್ರೀ ಅಕ್ಷಯ್ ಕುಲಕರ್ಣಿ ನೆರವೇರಿಸಲಿದ್ದಾರೆ.

## ಕಾಡಾನೆ ದಾಳಿಗೆ ಮಹಿಳೆ ಬಲಿ



ಚಿಕ್ಕಮಗಳೂರು: ಕಾಡಾನೆ ದಾಳಿಗೆ ಮಹಿಳೆ ಬಲಿಯಾದ ಘಟನೆ ಜಿಲ್ಲೆಯ ಆಲ್ದೂರು ಸಮೀಪದ ಹೆಡೆದಾಳು ಗ್ರಾಮದಲ್ಲಿ ನಡೆದಿದೆ.

ಮೃತ ಮಹಿಳೆಯನ್ನು ವೀಣಾ (45) ಎಂದು ಗುರುತಿಸಲಾಗಿದೆ.

ಮಹಿಳೆ ಕಾಫಿ ತೋಟಕ್ಕೆ ಕೆಲಸಕ್ಕೆ ಹೋಗುವ ವೇಳೆ ಆನೆ ದಾಳಿ ನಡೆಸಿದೆ. ಈ ವೇಳೆ ಮಹಿಳೆ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದಾಳೆ. ಆದರೆ ಸಾಧ್ಯವಾಗಿಲ್ಲ.

ಈ ವೇಳೆ ಆನೆ ದಾಳಿ ನಡೆಸಿ ಮಹಿಳೆಯ ತಲೆಯನ್ನು ತುಳಿದಿದೆ. ಇದರಿಂದ ಗಂಭೀರವಾಗಿ ಗಾಯಗೊಂಡ ಮಹಿಳೆ ಸ್ಥಳದಲ್ಲೇ ಸಾವಿಗೀಡಾಗಿದ್ದಾಳೆ.

ಕಳೆದ ಕೆಲವು ದಿನಗಳಿಂದ ಸುಮಾರು 7 ಕಾಡಾನೆಗಳು ಕಾಫಿ ತೋಟದ ಸುತ್ತಮುತ್ತವೇ ಬೀಡು ಬಿಟ್ಟಿವೆ.

ಇದರಿಂದ ಗ್ರಾಮಸ್ಥರು ಹಾಗೂ ಕೂಲಿ ಕಾರ್ಮಿಕರು ಓಡಾಡುವುದು ಕಷ್ಟವಾಗಿದೆ. ಆನೆಗಳನ್ನು ಸ್ಥಳದಿಂದ ಓಡಿಸುವಂತೆ ಸ್ಥಳೀಯರು ಅರಣ್ಯ ಇಲಾಖೆಗೆ ಒತ್ತಾಯಿಸಿದ್ದಾರೆ.

# ವಿವಾಹಿತ ಮಹಿಳೆ ಕಿರುಕುಳಕ್ಕೆ ಬೇಸತ್ತು ನಿವೃತ್ತ ಯೋಧ ಆತ್ಮಹತ್ಯೆಗೆ ಶರಣು

ಮಡಿಕೇರಿ: ಡೆತ್ನೋಟ್ ಬರೆದಿಟ್ಟು ನಿವೃತ್ತ ಯೋಧರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಡೆದಿದೆ.

ಸಂದೇಶ್ ಮೃತ ಯೋಧ. ಉಕ್ಕುಡ ನಿವಾಸಿಯಾಗಿದ್ದ ಸಂದೇಶ್ ಅವರಿಗೆ ಫೇಸ್‌ಬುಕ್‌ನಲ್ಲಿ ಪರಿಚಯವಾದ ವಿವಾಹಿತ ಮಹಿಳೆಯೊಬ್ಬಳು ಕಿರುಕುಳ ನೀಡುತ್ತಿದ್ದಳಂತೆ. ಹೀಗಾಗಿ ಡೆತ್ನೋಟ್ನಲ್ಲಿ ಉಲ್ಲೇಖಿಸಿ ಸಂದೇಶ್ ತಮ್ಮ ಮನೆಯಿಂದ ನಾಪತ್ತೆಯಾಗಿದ್ದರು. ಈ ಬಗ್ಗೆ ಸಂದೇಶ್ ಪತ್ನಿ ಪೊಲೀಸ್ ಅಧಿಕಾರಿಗಳಿಗೆ ದೂರು ನೀಡಿದ್ದಾರೆ.

ಈ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸಂದೇಶ್ಗಾಗಿ ಹುಡುಕಾಟ ನಡೆಸಿದ್ದಾರೆ. ಈ ವೇಳೆ ಸಂದೇಶ್ ಮನೆಯ ಸಮೀಪದ ಪಂಪಿನ ಕೆರೆ ಬಳಿ ಸಂದೇಶ್ ಮೊಬೈಲ್ ಹಾಗೂ ಚಪ್ಪಲಿ ಪತ್ತೆಯಾಗಿದೆ. ಹೀಗಾಗಿ ಸಂದೇಶ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ಪೊಲೀಸರು ಹಾಗೂ



ಅಗ್ನಿಶಾಮಕ ಸಿಬ್ಬಂದಿ ಮೊಬೈಲ್ ಹಾಗೂ ಚಪ್ಪಲಿ ಪತ್ತೆಯಾದ ಸ್ಥಳದಲ್ಲಿ ಮೃತದೇಹಕ್ಕಾಗಿ ಹುಡುಕಾಟ ನಡೆಸುತ್ತಿದ್ದಾರೆ.

ಡೆತ್ ನೋಟ್‌ನಲ್ಲಿ ಏನಿದೆ? ವಿವಾಹಿತ ಮಹಿಳೆ, ಆಕೆಯ ತಾಯಿ ಮತ್ತು ತಂಗಿ ಸೇರಿಕೊಂಡು ನನ್ನನ್ನು ಹನಿ ಟ್ರ್ಯಾಪ್‌ಗೆ ಬೀಳಿಸಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ. ಅವರು ಮೂವರು ನನ್ನ ಸಾವಿಗೆ ಕಾರಣ ಎಂದು ಡೆತ್ ನೋಟ್‌ನಲ್ಲಿ ಬರೆಯಲಾಗಿದೆ. ಮಹಿಳೆಯ ಅನ್ಯೆತಿಕ ಸಂಬಂಧಗಳು ನನಗೆ ತಿಳಿದುಬಂದ ಬಳಿಕ ಅವರೆಲ್ಲರೂ ನನ್ನನ್ನು ಫಾಲೋ ಮಾಡಲು, ಮೆಂಟಲ್ ಟಾರ್ಚರ್ ನೀಡಲು ಶುರು ಮಾಡಿದರು ಎಂದು ರೆಸಾರ್ಟ್ ಒಂದರ ಮಾಲೀಕ, ಒಬ್ಬ ಪೊಲೀಸ್ ಹಾಗೂ ಇಬ್ಬರು ಇತರರ ಹೆಸರನ್ನು ಸಂದೇಶ್ ಉಲ್ಲೇಖಿಸಿದ್ದಾರೆ. ನನ್ನ ಒಂದು ಕಾರು ಮತ್ತು ಎಲ್ಲ ಡಾಕ್ಯುಮೆಂಟ್ಸ್ ಆಕೆಯ ಮನೆಯಲ್ಲಿದೆ ಎಂದು ಸಂದೇಶ್ ಡೆತ್ ನೋಟ್‌ನಲ್ಲಿ ಬರೆದುಕೊಂಡಿದ್ದಾರೆ.

## 7 ವರ್ಷದ ಬಾಲಕಿ ಮೇಲೆ ಚಿರತೆ ದಾಳಿ: ಮಗಳನ್ನು ರಕ್ಷಿಸಿದ ತಂದೆ

ತುಮಕೂರು: ಅಪ್ಪ ಅಂದ್ರೆ ಹಾಗೆ ಮಕ್ಕಳಿಗೆ ಏನೇ ಕಷ್ಟ ಎದುರಾದ್ರೂ ವಾರಿಯರ್ ತರ ನಿಂತು ಅವರನ್ನ ರಕ್ಷಿಸ್ತಾನೆ. ಇದೀಗ ಇದೇ ರೀತಿ ಮಗಳ ಪ್ರಾಣಕ್ಕೆ ಕುತ್ತು ಬಂದಾಗ ತಂದೆ ರಿಯಲ್ ಹೀರೋ ಆಗಿ ನಿಂತ ಪ್ರಸಂಗವೊಂದು ನಡೆದಿದೆ. ವನ್ಯ ಮೃಗದ ಬಾಯಿಗೆ ಆಹಾರವಾಗ್ತಿದ್ದ ಮಗಳ ಜೀವವನ್ನ ತಂದೆಯೇ ಕಾಪಾಡಿದ್ದಾನೆ.



ಕಳೆದ ವಾರವಷ್ಟೇ ಬೆಂಗಳೂರಿನಲ್ಲಿ ಚಿರತೆಗಳ ಹಾವಳಿ ಶುರುವಾಗಿತ್ತು. ಇದೀಗ ಕಲ್ಪತರು ನಾಡಿನಲ್ಲಿ ಚಿರತೆಯೊಂದು ಬಾಲಕಿ ಮೇಲೆ ದಾಳಿ ಮಾಡಿದೆ. ಆದ್ರೆ, ಆಕೆಯ ತಂದೆಯ ಧೈರ್ಯ, ಸಾಹಸದಿಂದ ಚಿರತೆಯ ಬಾಯಿಯಿಂದ ಬಾಲಕಿ ಬದುಕುಳಿದಿದ್ದಾಳೆ.

ಮುಸ್ಸಂಜೆ ಸಮಯ ಪ್ರಾಣಿ ಪಕ್ಷಿಗಳೂ ಗೂಡು ಸೇರುವ ಹೊತ್ತು. ಈ ವೇಳೆ ಮನೆಯ ಅಂಗಳದಲ್ಲಿ ತನ್ನ ತಂದೆಯ ಜೊತೆ ಬಾಲಕಿ ಲೇಖನ ಆಟ ಆಡುತ್ತಿದ್ದಳು.

ಆಗ ದಿಢೀರ್ ಅಂತ ಎಂಟ್ರಿ ಕೊಟ್ಟ ಚಿರತೆ ಬಾಲಕಿಯ ಮೇಲೆ ಯಮರೂಪಿಯಂತೆ ಎರಗಿತ್ತು. ಆಮೇಲೆ ನಡೆದಿದ್ದೇ ಮಹಾನ್ ಸಾಹಸ.

ತುಮಕೂರು ತಾಲೂಕಿನ ಚಿಕ್ಕ ಬೆಳ್ಳಾವಿ ಗ್ರಾಮದ ಲೇಖನ ತಮ್ಮ ಮನೆಯ ಅಂಗಳದಲ್ಲಿ ತಂದೆ ರಾಕೇಶ್ ಜೊತೆ ಆಟವಾಡುತ್ತಿದ್ದಳು.

ಈ ವೇಳೆ ಚಿರತೆ ಆಕೆಯ ಮೇಲೆ ಏಕಾಏಕಿ ದಾಳಿ ಮಾಡಿದೆ. ಚಿರತೆ ತನ್ನ ಮಗಳ ಮೇಲೆ ದಾಳಿ ಮಾಡಿದ್ದನ್ನ ಕಂಡ ತಂದೆ ರಾಕೇಶ್ ಹೆದರದೇ ಸಮಯಪ್ರಜ್ಞೆ ಮೆರೆದಿದ್ದಾರೆ. ಲೇಖನ ಮೇಲೆ ಚಿರತೆ ಅಟ್ಯಾಕ್ ಮಾಡ್ತಿದ್ದಂತೆ ದೊಣ್ಣೆಯಿಂದ ಹೊಡೆದು ಅದನ್ನ ಬೆದರಿಸಿದ್ದಾರೆ.

## ವಿಷ ಸೇವಿಸಿ ಎಎಸ್‌ಐ ಆತ್ಮಹತ್ಯೆ

ಹುಬ್ಬಳ್ಳಿ: ವಿಷ ಸೇವಿಸಿ ಎಎಸ್‌ಐ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಗುಡಿಗೇರಿಯಲ್ಲಿ ಘಟನೆ ನಡೆದಿದೆ.

ಗುಡಿಗೇರಿ ಪೊಲೀಸ್ ಠಾಣೆಯ ಎಎಸ್‌ಐ ಬಸವರಾಜ ಶಾಂತವೀರಪ್ಪ ಪಾಯಣ್ಣವರ (54) ಆತ್ಮಹತ್ಯೆ ಮಾಡಿಕೊಂಡವರು. ರಾತ್ರಿ ಪಾಳಿ ಕೆಲಸ ಮುಗಿಸಿ ವಸತಿ ಗೃಹಕ್ಕೆ ಹೋಗಿದ್ದರು. ವಸತಿ ಗೃಹದ ಆವರಣದಲ್ಲಿ ದೇಗುಲದ ಬಳಿ ಮಲಗಿದ್ದರು. ಕುಟುಂಬಸ್ಥರು ಊಟಕ್ಕೆ ಎಬ್ಬಿಸಲು ಹೋದಾಗ ಎದ್ದೇಳಲಿಲ್ಲ. ಆಗ ಆತ್ಮಹತ್ಯೆ ವಿಷಯ ಬೆಳಕಿಗೆ ಬಂದಿದೆ. ವಿಷ ಸೇವಿಸಿ



ಆತ್ಮಹತ್ಯೆ ಮಾಡಿಕೊಂಡಿರುವುದು ಮರಣೋತ್ತರ ಪರೀಕ್ಷೆಯಲ್ಲಿ ಬಹಿರಂಗವಾಗಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ.

ಮೃತ ಎಎಸ್‌ಐ ಕೆಲವು ದಿನಗಳಿಂದ ಕಾಲುನೋವಿನಿಂದ ಬಳಲುತ್ತಿದ್ದರು. ಅದೇ ಆತ್ಮಹತ್ಯೆಗೆ ಕಾರಣವಿರ ಬಹುದೆಂದು ಶಂಕಿಸಲಾಗಿದೆ. ಮೃತ ಬಸವರಾಜ ಮೂಲತಃ ಗದಗ ಜಿಲ್ಲೆಯ ಗಜೇಂದ್ರಗಢ ಸಮೀಪದ ಶಾಂತಗಿರಿ ಗ್ರಾಮದವರು. ಬಸವರಾಜ ಅವರಿಗೆ ಪತ್ನಿ ಮತ್ತು ಮೂವರು ಮಕ್ಕಳು ಇದ್ದರು. ಗುಡುಗೇರಿ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

# ಸಮಾಜದಲ್ಲಿ ಸ್ವಾಭಿಮಾನದಿಂದ ಬದುಕಬೇಕಾದರೆ ಶಿಕ್ಷಣ ಅತೀ ಅವಶ್ಯ: ಸರ್ವೋತ್ತಮ ಜಾರಕಿಹೊಳಿ

ಮೂಡಲಗಿ: ಶಿಕ್ಷಣದ ಮೂಲಕ ಸಮಾಜ ಸಂಘಟನೆ ಸಾಧ್ಯ. ಸಮಾಜದಲ್ಲಿ ಸ್ವಾಭಿಮಾನದಿಂದ ಬದುಕಬೇಕಾದರೆ ಶಿಕ್ಷಣ ಅತೀ ಅವಶ್ಯ ಎಂದು ಯುವ ನಾಯಕ ಸರ್ವೋತ್ತಮ ಜಾರಕಿಹೊಳಿ ಹೇಳಿದರು.

ತಾಲೂಕಿನ ಯಾದವಾಡ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಸಮಗಾರ(ಚಮ್ಮಾರ) ಹರಳಯ್ಯ ಸಂಘ ಬೆಂಗಳೂರು ಸಂಘಕ್ಕೆ ಆಯ್ಕೆಯಾದ ಚುನಾಯಿತ ಪ್ರತಿನಿಧಿಗಳಿಗೆ ಹಾಗೂ ನಿವೃತ್ತ ನೌಕರರಿಗೆ ಗೌರವ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜವು ಇನ್ನಷ್ಟು ಉತ್ತುಂಗಕ್ಕೆ ಬೆಳೆಯಲಿ, ಈ ನಿಟ್ಟಿನಲ್ಲಿ ನಮ್ಮ ಜಾರಕಿಹೊಳಿ ಕುಟುಂಬವು ತಮ್ಮ ಜೊತೆ ಸದಾ ಬೆನ್ನಲುಬಾಗಿ ಇರುತ್ತದೆ. ತಮ್ಮ ಸಮಾಜಕ್ಕೆ ಸಹಾಯ ಸಹಕಾರ ನೀಡುತ್ತೇವೆ. ತಾವುಗಳು ಸಮಾಜದ ಸಂಘಟನೆಗೆ ಹೆಚ್ಚಿನ ಮಹತ್ವ ನೀಡಿ ಸದಸ್ಯತ್ವ ಅಭಿಯಾನದ ಮೂಲಕ ಸಮಾಜಕ್ಕೆ ಬಲ ಸಿಗುತ್ತದೆ. ಸಮಾಜದ ಅಭಿವೃದ್ಧಿಗೆ ತಾವೆಲ್ಲರೂ ಕಂಕಣಬದ್ಧರಾಗಿ ದುಡಿಯಬೇಕು. ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ ಸಂಘಟನೆಗೆ ಹೆಚ್ಚಿನ ಪ್ರಾಮುಖ್ಯತೆ ದೊರೆಯುತ್ತಿದೆ. ಹರಳಯ್ಯ ಸಮಾಜ ಬಾಂಧವರು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂದರು.




ಸಮಾರಂಭದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ತೊಂಡಿಕಟ್ಟಿಯ ಶ್ರೀ ಅವಧೂತ ಗಾಳೇಶ್ವರ ಮಠದ ಪೂಜ್ಯ ಶ್ರೀ ಅಭಿನವ ವೆಂಕಟೇಶ್ವರ ಮಹಾರಾಜರು ಮಾತನಾಡಿ ಶರಣ ಹರಳಯ್ಯ ಅವರನ್ನು ಜಾತಿಯಿಂದ ಅಳೆಯಬಾರದು ಅವರು ಶ್ರೇಷ್ಠ ತತ್ವಜ್ಞಾನಿಯಾಗಿದ್ದರು. ಬಸವಣ್ಣನವರಿಗೆ ಶರಣು ಎಂದಿದ್ದಕ್ಕೆ ಶರಣು ಶರಣಾರ್ಥಿ ಎಂದೆನಿಸಿಕೊಂಡ ಮಹಾಶರಣ ಹರಳಯ್ಯನವರು. ಸಮಾಜದ ಬಾಂಧವರು ತಮ್ಮ ದುಡಿಮೆಯಲ್ಲಿ ಒಂದಿಷ್ಟು ಹಣ ಸಮಾಜದ ಅಭಿವೃದ್ಧಿ ಕಾರ್ಯಕ್ಕೆ ನೀಡಿ ಸಮಾಜದ ಶ್ರೇಯೋಭಿವೃದ್ಧಿ ಕೈಜೋಡಿಸಬೇಕು ಎಂದರು.

ಕರ್ನಾಟಕ ರಾಜ್ಯ ಸಮಗಾರ(ಚಮ್ಮಾರ) ಹರಳಯ್ಯ ಸಂಘದ ಸದಸ್ಯ ಶಂಕರೆಪ್ಪ ಬೆಳಗಲಿ ಮಾತನಾಡಿ, ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ನಮ್ಮ ಹರಳಯ್ಯ ಸಮಾಜಕ್ಕೆ ಸಾಕಷ್ಟು ಸಹಾಯ ಸಹಕಾರ ನೀಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಸಮಾಜದ ಅಭಿವೃದ್ಧಿಗೆ ಹೆಚ್ಚಿನ ಪ್ರಾಮುಖ್ಯತೆ ದೊರೆಕಿದೆ ಹಾಗೂ ಸಮಾಜದ ಸದಸ್ಯತ್ವ ಅಭಿಯಾನದ ಕುರಿತು ಹಾಗೂ ಬೆಳಗಾವಿ ಜಿಲ್ಲೆಯ ವಿವಿಧ ತಾಲೂಕು, ಗ್ರಾಮ ಮಟ್ಟದಲ್ಲಿ ಸಮಾಜ ಸಂಘಟನೆಯನ್ನು ಮಾಡಲಾಗುತ್ತದೆ. ಯುವ ಸಮುದಾಯ ಹರಳಯ್ಯ ಸಮಾಜ ಸಂಘಟನೆಯಲ್ಲಿ ಪಾಲ್ಗೊಂಡು ಉತ್ತಮ ಸಮಾಜ ರೂಪಿಸಬೇಕು ಎಂದರು.

ಕೊಪದಟ್ಟಿಯ ಪೂಜ್ಯ ಶ್ರೀ ಶಿವಲಿಂಗಪ್ಪ ಅಜ್ಜನವರು ಹುಬ್ಬಳ್ಳಿ ಸಾನಿಧ್ಯ ವಹಿಸಿದ್ದರು. ಅಧ್ಯಕ್ಷತೆ ಶ್ರೀ ಹರಳಯ್ಯ ಸಮಾಜದ ಅಣ್ಣಪ್ಪ ಬೆಣಗಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗ್ರಾ.ಪಂ ಅಧ್ಯಕ್ಷ ಬಸವರಾಜ ಭೂತಾಳಿ ಉಪಸ್ಥಿತರಿದ್ದರು.

ವೇದಿಕೆ ಮೇಲೆ ಗೌರವ ಸನ್ಮಾನಿತರಾದ ಕರ್ನಾಟಕ ರಾಜ್ಯ ಸಮಗಾರ(ಚಮ್ಮಾರ) ಹರಳಯ್ಯ ಸಂಘದ ರಾಜ್ಯಾಧ್ಯಕ್ಷ ಜಗದೀಶ ಬೆಟಗೇರಿ, ಪ್ರಧಾನ ಕಾರ್ಯದರ್ಶಿ ಸುನೀಲಕುಮಾರ ಮದಲಭಾವಿ, ಕೋಶಾಧಿಕಾರಿ ಮಂಜುನಾಥ ಹಂಜಗಿ, ಉಪಾಧ್ಯಕ್ಷರುಗಳಾದ ಪರುಶರಾಮ ಅರಕೇರಿ, ಭೀಮರಾವ ಕಟ್ಟಿಮನಿ, ವಾಸು. ಬಿ,ಮಹಾದೇವ ಕಬಾಡಿ, ಉಪ ಕಾರ್ಯದರ್ಶಿ ನಾಗರಾಜ ಕಲಾದಗಿ, ಸಂಘಟನಾ ಕಾರ್ಯದರ್ಶಿಗಳಾದ ದೀಪಕ ಕುಡಾಲಕರ, ರಮೇಶ ವತನ, ಪ್ರವೀಣ ರಾಯಬಾಗ, ವಿನಾಯಕ ಕಾನಡೆ,ಈಶ್ವರ ಕನೇರಿ,ದಶರಥ ಅರಕೇರಿ, ಕೃಷ್ಣಪ್ಪ ಬೆಟಗೇರಿ,ಸರೋಜಾ ಸಂಪಗಾಂವ,ರಾಘವೇಂದ್ರ ಗಾಮನಗಟ್ಟಿ, ಸದಸ್ಯರುಗಳಾದ ಯಲ್ಲಪ್ಪ ಬೆಂಡಿಗೇರಿ,ಶಿವಾನಂದ ಮಬ್ರುಮಕರ್, ಯಲ್ಲಪ್ಪ ಸಾನಕೆನ್ನವರ, ಧರ್ಮಣ್ಣ ಸಾನಕೆನ್ನವರ, ಪರುಶರಾಮ ಹೊನಕೇರಿ,ರಾಘವೇಂದ್ರ ದೊಡಮನಿ,ಸುನೀಲ ಹೊಂಗಲ,ನಂದನ ಬೋರಕರ,ಆನಂದ ಮದಲಭಾಂವಿ,ಅಶೋಕ ಸೌದಾಗರ, ಸಂಗಮೇಶ ಬಾಲಾಗಾಂವಿ,ರಾಯಗೊಂಡ ಸಾಳೆ,ನಿರಂಜನ ಬಾಬು,ವಿದ್ಯಾಧರ ತೇರದಾಳ ಹಾಗೂ ನಿವೃತ್ತ ನೌಕರರಾದ ಶಿವಪ್ಪ ಬೆಣಗಿ,ಶಿವಪ್ಪ ಅರಳಿಮಟ್ಟಿ,ದುರ್ಗಪ್ಪ ಸವದತ್ತಿ, ಅನ್ನಕ್ಕ ಸವದತ್ತಿ,ವಿಠ್ಠಲ ಬೆಣಗಿ, ಭಾರತಿ ಬೆಣಗಿ, ಮುತ್ತಪ್ಪ ಅರಳಿಮಟ್ಟಿ ಇವರುಗಳಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ನಿವೃತ್ತ ಶಿಕ್ಷಕ ದುರ್ಗಪ್ಪ ಸವದತ್ತಿ ನಿರೂಪಿಸಿ,ವಂದಿಸಿದರು.

# ರಾಜ್ಯದ ಸಂಶೋಧನಾ ಕ್ಷೇತ್ರದಲ್ಲಿ ಹೂಡಿಕೆಗಿರುವ ವಿಪುಲ ಅವಕಾಶಗಳನ್ನು ಬಳಸಿಕೊಳ್ಳಿ: ಸಚಿವ ಬಿ.ನಾಗೇಂದ್ರ ಕರೆ

ಬೆಂಗಳೂರು: ನಮ್ಮ ಸರ್ಕಾರ ರಾಜ್ಯವನ್ನು ಸಂಶೋಧನಾ ಕ್ಷೇತ್ರದ ಪ್ರಮುಖ ಕೇಂದ್ರವನ್ನಾಗಿಸುವ ನಿಟ್ಟಿನಲ್ಲಿ ಕರ್ನಾಟಕ ರಿಸರ್ಚ್ ಫೌಂಡೇಶನ್‌ನಂತಹ ಹಲವಾರು ಯೋಜನೆಗಳನ್ನ ರೂಪಿಸಿದೆ. ಹಾಗೆಯೇ, ಸಂಶೋಧನಾ ಕ್ಷೇತ್ರದ ಹೂಡಿಕೆಗೆ ಅಗತ್ಯ ಪ್ರೋತ್ಸಾಹ ನೀಡಲಾಗುತ್ತಿದ್ದು ಸಂಸ್ಥೆಗಳ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಯುವ ಸಬಲೀಕರಣ, ಕ್ರೀಡೆ ಮತ್ತು ಬುಡಕಟ್ಟು ಕಲ್ಯಾಣ ಸಚಿವರಾದ ಬಿ. ನಾಗೇಂದ್ರ ಕರೆ ನೀಡಿದರು.

ನಗರದಲ್ಲಿ ವಿಜ್ಞಿ ಸಂಸ್ಥೆ ಹಾಗೂ ಯೂನಿವರ್ಸಿಟಿ ಆಫ್ ಇಲಿನಾಯ್ಸ್ ಅರ್ಬಾನಾ-ಚಾಂಪೇನ್‌ನ ಮಧ್ಯೆ ಸಂಶೋಧನೆಗಾಗಿ ನಡೆದಂತಹ ಒಡಂಬಡಿಕೆಗೆ ಸಾಕ್ಷಿಯಾಗಿ ಅವರು ಮಾತನಾಡಿದರು. ನಮ್ಮ ದಿನನಿತ್ಯದ ಹಲವಾರು ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸಂಶೋಧನೆಗಳ ಪಾತ್ರ ಪ್ರಮುಖವಾದದ್ದು. ಇಂದಿನ ಒತ್ತಡದ ಜೀವನಶೈಲಿಯಿಂದಾಗಿ ಟೈಪ್-2 ನಂತಹ ಕಾಯಿಲೆಗಳಿಗೆ ಜನರು ಸುಲಭವಾಗಿ ತುತ್ತಾಗುತ್ತಿದ್ದಾರೆ. ಈ ರೋಗಗಳನ್ನ ನಿಯಂತ್ರಿಸುವ ನಿಟ್ಟಿನಲ್ಲಿ ಉನ್ನತ ಮಟ್ಟದ ಸಂಶೋಧನೆಯ ಅಗತ್ಯವನ್ನು ಮನಗೊಂಡು ನಮ್ಮ ಕನ್ನಡಿಗದ್ದೇ ಆದ ವಿಜ್ಞಿ ಸಂಸ್ಥೆ ಅಮೇರಿಕಾದ ವಿಶ್ವವಿದ್ಯಾಲಯದಲ್ಲಿ 12.5 ಮಿಲಿಯನ್ ಹಣವನ್ನು ಹೂಡಿಕೆ ಮಾಡುತ್ತಿರುವುದು ಬಹಳ ಹೆಮ್ಮೆಯ ವಿಷಯ. ಸಂಶೋಧನೆಗಳ ಮಹತ್ವವನ್ನು ನಮ್ಮ ಸರಕಾರ ಅರಿತಿದೆ. ರಾಜ್ಯವನ್ನು ಸಂಶೋಧನೆಯ ಪ್ರಮುಖ ಕೇಂದ್ರವನ್ನಾಗಿಸುವ ನಿಟ್ಟಿನಲ್ಲಿ ಕರ್ನಾಟಕ ರಿಸರ್ಚ್ ಫೌಂಡೇಶನ್ ಸ್ಥಾಪನೆಗೆ ಎಲ್ಲಾ ಕ್ರಮಗಳನ್ನ ಕೈಗೊಂಡಿದೆ. ಹಾಗೆಯೇ, ಸಂಶೋಧನಾ ಕ್ಷೇತ್ರದಲ್ಲಿ ಹೂಡಿಕೆಗೆ ಬಹಳಷ್ಟು ಪ್ರೋತ್ಸಾಹವನ್ನು ನೀಡಲಾಗುತ್ತಿದೆ. ಇದನ್ನ ವಿಜ್ಞಿ ಯಂತಹ ಸಂಸ್ಥೆಗಳು




ಸದುಪಯೋಗಪಡಿಸಿಕೊಳ್ಳಬೇಕು. ಈ ಮೂಲಕ ರಾಜ್ಯದಲ್ಲಿ ಸಂಶೋಧನೆಯ ಪರಿಸರವನ್ನ ಅಭಿವೃದ್ದಿಪಡಿಸುವ ಜೊತೆಯಲ್ಲಿಯೇ ಉದ್ಯೋಗಾವಕಾಶಗಳ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ವಿಜ್ಞಿ ಇಂಕ್ ಸಂಸ್ಥೆಯ ಸಂಸ್ಥಾಪಕ ಹಾಗೂ ಸಿಇಓ ಡಾ. ವಿಷ್ಣುವರ್ಧನ್ ಮಾತನಾಡಿ, ನ್ಯಾಷನಲ್ ಸೆಂಟರ್ ಫಾರ್ ಹೆಲ್ತ್ ಸ್ಟಾಟಿಸ್ಟಿಕ್ಸ್ ನ ಸಮೀಕ್ಷೆಯಲ್ಲಿ ಶೇಕಡಾ 88 ರಷ್ಟು ವಯಸ್ಕರು ದಿನನಿತ್ಯದ ಚಯಾಪಚಯ ಕ್ರಿಯೆಯಲ್ಲಿ ಅನರ್ಹರಾಗಿದ್ದಾರೆ ಮತ್ತು 1970 ರ ದಶಕದಿಂದ ಸರಾಸರಿ ವಯಸ್ಕರು 15 ಕೆಜಿ ತೂಕವನ್ನು ಹೆಚ್ಚಿಸಿಕೊಂಡಿದ್ದಾರೆ ಎಂಬ ಆಘಾತಕಾರಿ ಅಂಶವನ್ನು ಬಹಿರಂಗಪಡಿಸಿದೆ. ಇದರಿಂದಾಗಿ ಅಮೇರಿಕಾದಲ್ಲಿ ಆರೋಗ್ಯದ ವೆಚ್ಚವನ್ನು 4 ಟ್ರಿಲಿಯನ್‌ಗೆ ಹೆಚ್ಚಿಸಿದೆ. ಈ ಪ್ರವೃತ್ತಿ ಭಾರತ ದೇಶದಲ್ಲೂ ಕಾಣಿಸಿಕೊಳ್ಳುತ್ತಿದೆ. ಈ ಹಿನ್ನಲೆಯಲ್ಲಿ ವಿಜ್ಞಿ ಸಂಸ್ಥೆಯು ತಡೆಗಟ್ಟುವಿಕೆ, ಮುನ್ಸೂಚನೆ, ನಿಖರ, ಎಲ್ಲರೂ ಭಾಗವಹಿಸುವಂತಹ ಮತ್ತು ವೈಯಕ್ತಿಕ ಚಿಕಿತ್ಸಾ ವಿಧಾನವನ್ನ ಅನುಷ್ಠಾನಗೊಳಿಸುತ್ತಿದೆ ಎಂದರು.

ಈ ತಂತ್ರಜ್ಞಾನಗಳು ಜಾಗತಿಕ ಸಹಯೋಗದಲ್ಲಿ ಅಭಿವೃದ್ದಿ ಹೊಂದುತ್ತಿವೆ. ಜಾಗತಿಕ ಪ್ರಯತ್ನದ ಅನ್ವೇಷಣೆಯ ಪ್ರಮುಖ ಭಾಗವಾಗುವ ನಿಟ್ಟಿನಲ್ಲಿ ವಿಜ್ಞಿ ಸಂಸ್ಥೆ, ಅಮೇರಿಕಾದ ಪ್ರಮುಖ ಸಂಶೋಧನಾ ಸಂಸ್ಥೆಯಾಗಿ ಹೊರಹೊಮ್ಮಿರುವ ಯುನಿವರ್ಸಿಟಿ ಆಫ್ ಇಲಿಯಾನ್ಸ್ ಅರ್ಬಾನಾ-ಚಾಂಪೇನ್‌ಲ್ಲಿ "ಶ್ರೀನಿವಾಸಲು ಂಖಫಾರ್‌ವೆಲ್‌ನೆಸ್ ಸೆಂಟರ್" ಸ್ಥಾಪನೆಗಾಗಿ 12.5 ಮಿಲಿಯನ್ ಡಾಲರ್ ಹೂಡಿಕೆಗೆ ಇಂದು ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಈ ಸಂಶೋಧನಾ ಕೇಂದ್ರವು, ವಿಶ್ವದ ಪ್ರತಿಷ್ಠಿತ ವಿಜ್ಞಾನಿಗಳೂ, ಇಂಜಿನೀಯರ್‌ಗಳೂ ಮತ್ತು ಆರೋಗ್ಯ ವ್ಯವಸ್ಥೆಯ ತಜ್ಞರ ತಂಡವನ್ನು ಒಗ್ಗೂಡಿಸಲಿದ್ದು, ಪ್ರಸ್ತುತ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಲಿದೆ. ಹೈದರಾಬಾದ್‌ನಲ್ಲಿ ಭಾರತದ ಮೊದಲ ಐಐಐಟಿಯನ್ನು ಸ್ಥಾಪಿಸಲು ಹೆಸರುವಾಸಿಯಾದ ಕಂಪ್ಯೂಟರ್ ವಿಷನ್‌ನ ಉನ್ನತ ಜಾಗತಿಕ ವಿಜ್ಞಾನಿ, ಹೆಸರಾಂತ ಪ್ರೊ. ನರೇಂದ್ರ ಅಹುಜಾ ಅವರು ಕೇಂದ್ರವನ್ನು ಮುನ್ನಡೆಸಲಿದ್ದಾರೆ. ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಸಂಶೋಧನಾ ಕೇಂದ್ರಗಳನ್ನು ಪ್ರಾರಂಭಿಸುವ ಮೂಲಕ 500 ಕ್ಕೂ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಇಲಿನಾಯ್ಸ್ ಅರ್ಬಾನಾ ವಿಶ್ವವಿದ್ಯಾಲಯದ ಕುಲಪತಿ-ಚಾಂಪೇನ್ (ಯುಎಸ್‌ಎ) ಪ್ರೊ. ರಾಬರ್ಟ್ ಜೆ. ಜೋನ್ಸ್, ಗ್ರೇಂಜರ್ ಕಾಲೇಜ್ ಆಫ್ ಎಂಜಿನಿಯರಿಂಗ್‌ನ ಡೀನ್ ಪ್ರೊ. ರಶೀದ್ ಬಶೀರ್, ಇಲಿನಾಯ್ಸ್ ಅರ್ಬಾನಾ ವಿಶ್ವವಿದ್ಯಾಲಯದ ಸಂಶೋಧನಾ ಪ್ರಾಧ್ಯಾಪಕ ಪ್ರೊ. ನರೇಂದ್ರ ಅಹುಜಾ, ಪ್ರೊಫೆಸರ್-ಚಾಂಪೇನ್ ಕಾರ್ಯಕ್ರಮದಲ್ಲಿ ಕೊಯಿಟಾ ಸೆಂಟರ್ ಫಾರ್ ಡಿಜಿಟಲ್ ಹೆಲ್ತ್, ಐಐಟಿ ಬಾಂಬೆ ಲಿವ್‌ಲೈಫ್ ಆಸ್ಪತ್ರೆಗಳ ವ್ಯವಸ್ಥಾಪಕ ನಿರ್ದೇಶಕ ಪ್ರೊ.ಗಣೇಶ್ ರಾಮಕೃಷ್ಣ, ಕ್ಲಿನಿಕಲ್ ನಿರ್ದೇಶಕ ಮತ್ತು ಕಿಮ್ಸ್ ಮುಖ್ಯ ಶಸ್ತ್ರ ಚಿಕಿತ್ಸಕ ಡಾ.ನಂದಕಿಶೋರ್ ದುಕ್ಕಿಪಾಟಿ ಉಪಸ್ಥಿತರಿದ್ದರು.

## ನಿರುದ್ಯೋಗಿ ಮಹಿಳೆಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 2023-24 ನೇ ಸಾಲಿನಲ್ಲಿ ಮಹಿಳಾ ತರಬೇತಿ ಯೋಜನೆಯಡಿ ನಿರುದ್ಯೋಗಿ ಮಹಿಳೆಯರಿಗೆ ವಿವಿಧ ರೀತಿಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಲು ಅರ್ಹ ಸ್ವಯಂ ಸೇವಾ ತರಬೇತಿ ಸಂಸ್ಥೆಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

**ಅರ್ಹತೆಗಳು:**

ತರಬೇತಿ ನೀಡುವ ಸಂಸ್ಥೆಯು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಲ್ಲಿ ಮತ್ತು ಕೇಂದ್ರ ಸರ್ಕಾರದ ಅಧೀನದಲ್ಲಿ ಅಕ್ರಿಡಿಟೇಶನ್ ಪಡೆದಿರುವ ಸಂಸ್ಥೆಯಾಗಿರಬೇಕು, ತರಬೇತಿ ಸಂಸ್ಥೆಯು ತರಬೇತಿ ನೀಡಲು ಮೂಲಭೂತ ಸೌಕರ್ಯಗಳನ್ನು ಹೊಂದಿರಬೇಕು, ತರಬೇತಿ ನೀಡುವಚಟುವಟಿಕೆಗೆ ಸಂಬಂಧಿಸಿದಂತೆ, ಸಂಸ್ಥೆಯವರು ಹೊಂದಿರುವ ಸ್ಥಳಾವಕಾಶ ಮಾಹಿತಿಯಂತ್ರೋಪಕರಣಗಳು ಹಾಗೂ ಸಂಪನ್ಮೂಲ ವ್ಯಕ್ತಿಗಳ ಮಾಹಿತಿಯನ್ನು ಸಲ್ಲಿಸಬೇಕು ಹಾಗೂ ತರಬೇತಿ ಸಂಸ್ಥೆಯು ಹೊಂದಿರುವ ಸ್ಥಳವಕಾಶ ಹಾಗೂ ಯಂತ್ರೋಪಕರಣಗಳ ಛಾಯಾಚಿತ್ರ ಸಲ್ಲಿಸಬೇಕು.

ಅಕ್ರಿಡಿಟೆಶನ್ ಹೊಂದಿರುವ ಅರ್ಹ ತರಬೇತಿ ಸಂಸ್ಥೆಗಳು ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ದ್ವಿಪ್ರತಿಯಲ್ಲಿ ನ.26 2023 ರೊಳಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಿಮಾಂಡ ಹೋಮ ಬಿಲ್ಡಿಂಗ ಶಿವಾಜಿನಗರ ಬೆಳಗಾವಿ ಅವರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಮಹಿಳಾ ಅಭಿವೃದ್ಧಿ ನಿಗಮ ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆ: "ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ"ಯಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ (PMKSY) 2023-24ನೇ ಸಾಲಿನ ಪ್ರತಿ ಹನಿಗೆ ಅಧಿಕ ಬೆಳೆ (ಸೂಕ್ಷ್ಮ ನೀರಾವರಿ) ಕಾರ್ಯಕ್ರಮದಡಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲು ಎಲ್ಲಾ ವರ್ಗದ ರೈತರಿಗೆ ಗರಿಷ್ಠ 5 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ಹಾಗೂ ತರಕಾರಿ ಮತ್ತು ಹೂ ಬೆಳೆಗಳಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶಕ್ಕೆ ಸಹಾಯಧನ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಶೇ. 90 ರಷ್ಟು ಸಹಾಯಧನ, ಇತರೆ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಶೇ. 75 ರಷ್ಟು ಸಹಾಯಧನ ಹಾಗೂ 2 ಹೆಕ್ಟೇರ್ ಮೇಲ್ಪಟ್ಟು 5 ಹೆಕ್ಟೇರ್ ವರೆಗೂ ಶೇ. 45 ರಷ್ಟು ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ಅರ್ಜಿಯನ್ನು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ತೋಟಗಾರಿಕೆ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಬೆಳಗಾವಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ. 9 ರಂದು ಧನ್ವಂತರಿ ಜಯಂತಿ ಆಚರಣೆ

ಬೆಳಗಾವಿ: ಸಾರ್ವಜನಿಕರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಜಿಲ್ಲಾ ಆಯುಷ್ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಧನ್ವಂತರಿ ಜಯಂತಿ ಅಂಗವಾಗಿ ನಗದರ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನ.10 2023 ಬೆಳಿಗ್ಗೆ 10 ಗಂಟೆಗೆ 8 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ನಡೆಯಲಿದೆ.

ಲೋಕೋಪಯೋಗಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯ ಕ್ರಮ ಉದ್ಘಾಟಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಅತಿಥಿಗಳಾಗಿ ಆಗಮಿಸಲಿದ್ದಾರೆ.

ಬೆಳಗಾವಿ ಉತ್ತರ ಶಾಸಕರಾದ ಆಸೀಫ್ (ರಾಜು) ಸೇಠ ಕಾರ್ಯ ಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತರಾದ ಸಂಜಯ ಬಿ. ಶೆಟ್ಟೆಣ್ಣವರ ,ಬೆಳಗಾವಿ ಉತ್ತರ ವಲಯ ಪೊಲೀಸ್ ಮಹಾನಿರೀಕ್ಷರಾದ ವಿಕಾಶ್ ಕುಮಾರ್ ವಿಕಾಶ್, ಬೆಳಗಾವಿ ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ, ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಎಸ್ . ಎನ್. ಸಿದ್ದರಾಮಪ್ಪ ,ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರಾಗ ಅಶೋಕ್ ದುಡುಗುಂಟಿ, ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಮಹೇಶ್ ಕೋಣಿ, ಬೆಳಗಾವಿ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಶ್ರೀಕಾಂತ್ ಬಿ. ಸುಣಧೋಳಿ ಅವರು ಪ್ರಕಟನೆಯಲ್ಲಿ ತಿಳಸಿದ್ದಾರೆ.

## ನ.18 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ದೆ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕೊಲ್ಹಾಪೂರ ಸರ್ಕಲ್ ಹತ್ತಿರದ ಒಳಾಂಗಣ ಕ್ರೀಡಾಂಗಣದಲ್ಲಿ (ಮಾಹೇಶ್ವರಿ ಅಂಧಮಕ್ಕಳ ಶಾಲೆಯ ಮುಂಭಾಗ) ನ.18 2023 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ವಿವಿಧ ಆಯ್ಕೆಗಳು ನಡೆಯಲಿವೆ

ಯುವಜನೋತ್ಸವದಲ್ಲಿ 15 ರಿಂದ 29 ವರ್ಷದೊಳಗಿನ ಯುವಕ, ಯುವತಿಯರಿಗಾಗಿ ಜಾನಪದ ನೃತ್ಯ, ಜಾನಪದಗೀತೆ, ಜನಪದ ನೃತ್ಯ (ವೈಯಕ್ತಿಕ), ಜನಪದಗೀತೆ (ವೈಯಕ್ತಿಕ), ಕಥೆ ಬರೆಯುವುದು, ಪೋಸ್ಟರ್ ಮೇಕಿಂಗ್, (ವೈಯಕ್ತಿಕ), Declamation (ಘೋಷಣೆ), ಛಾಯಾಚಿತ್ರಣ (ವೈಯಕ್ತಿಕ) ಸ್ಪರ್ಧೆಗಳನ್ನು ನಡೆಸಲಾಗುವುದು.

ಜಿಲ್ಲೆಯ 15 ರಿಂದ 29 ವರ್ಷದೊಳಗಿನ ಸ್ಪರ್ಧಾಳುಗಳು ವಯಸ್ಸಿನ ದೃಢೀಕರಣಕ್ಕಾಗಿ ಆಧಾರ ಗುರುತಿನ ಚೀಟಿ, ಶಾಲಾ ದಾಖಲಾತಿ ಹಾಗೂ ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿಯೊಂದಿಗೆ ನೇರವಾಗಿ ನ. 18 2023 ರ ಬೆಳಿಗ್ಗೆ 9 ಗಂಟೆ ಒಳಗಾಗಿ ನಗರದ ಕೊಲ್ಹಾಪೂರ ಸರ್ಕಲ್ ಹತ್ತಿರದ ಒಳಾಂಗಣ ಕ್ರೀಡಾಂಗಣದಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಭಾಗವಹಿಸುವ ಸ್ಪರ್ಧಾಳುಗಳಿಗೆ ಉಚಿತ ಪ್ರವೇಶವಿದ್ದು, ಬೆಳಗಾವಿ ಹೊರತುಪಡಿಸಿ ಇತರೆ ತಾಲೂಕುಗಳಿಂದ ಬರುವಂತಹ ಸ್ಪಧಾಳುಗಳಿಗೆ ಪ್ರಯಾಣ ಭತ್ಯೆ, ಎಲ್ಲ ಸ್ಪರ್ಧಾಳುಗಳಿಗೆ ಲಘು ಊಟೋಪಹಾರದ ವ್ಯವಸ್ಥೆ, ವಿಜೇತ ಸ್ಪರ್ಧಾಳುಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ನೀಡಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಬಸವರಾಜ ಜಕ್ಕನ್ನವರ ಅವರ ದೂರವಾಣಿ ಸಂಖ್ಯೆ. 7411144485 ನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಂಬ್ರಾ ವಿಮಾನ ನಿಲ್ದಾಣದ ರನ್ ವೇ, ಟರ್ಮಿನಲ್ ವಿಸ್ತರಣೆಗೆ ಜಮೀನು ಒದಗಿಸಲು ಕ್ರಮ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಬೆಳಗಾವಿಯ ಸಾಂಬ್ರಾ ವಿಮಾನನಿಲ್ದಾಣದ ರನ್ ವೇ ಮತ್ತು ಟರ್ಮಿನಲ್ ವಿಸ್ತರಣೆಗಾಗಿ ಅಗತ್ಯವಿರುವ ಅಂದಾಜು 57 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ವಿಮಾನ ನಿಲ್ದಾಣಕ್ಕೆ ಒದಗಿಸಲು ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ವಿಮಾನ ನಿಲ್ದಾಣಕ್ಕೆ ಅಗತ್ಯವಿರುವ ಜಮೀನು ಒದಗಿಸುವುದಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬುಧವಾರ(ನ.8) ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರನ್ ವೇ ಮತ್ತು ಟರ್ಮಿನಲ್ ಜಮೀನು ಅಗತ್ಯತೆ ಹಾಗೂ ಅದರ ಸಮರ್ಪಕ ಬಳಕೆಯ ಕುರಿತು ನೀಲನಕ್ಷೆಯ ಸಮೇತ ಸಮಗ್ರ ವರದಿಯನ್ನು ಸಲ್ಲಿಸಬೇಕು. ಇದನ್ನು ಆಧರಿಸಿ ಅಗತ್ಯತೆ ಅನುಸಾರ ಜಮೀನು ಒದಗಿಸಲಾಗುವುದು ಎಂದು ತಿಳಿಸಿದರು.

ಸ್ಥಳೀಯ ಜನರಿಗೆ ಪರ್ಯಾಯ ರಸ್ತೆ ಮತ್ತಿತರ ಸೌಕರ್ಯಗಳನ್ನು ಒದಗಿಸುವ ಬಗ್ಗೆ ವಿಮಾನ ನಿಲ್ದಾಣದ ನಿರ್ದೇಶಕರು ಸ್ಪಷ್ಟ ಹಾಗೂ ಲಿಖಿತ ಮಾಹಿತಿಯನ್ನು ಒದಗಿಸಬೇಕು ಎಂದರು.

ಈಗಾಗಲೇ ಸಾಕಷ್ಟು ಜಮೀನು ಒದಗಿಸಲಾಗಿದೆ. ಅದ್ದರಿಂದ ರನ್ ವೇ ಮತ್ತು ಟರ್ಮಿನಲ್ ವಿಸ್ತರಣೆ, ಸಿಗ್ನಲ್ ದೀಪಗಳ ಅಳವಡಿಕೆಗೆ ಅತ್ಯಗತ್ಯವಾಗಿರುವ ಜಮೀನು ಮಾತ್ರ ಒದಗಿಸಲಾಗುವುದು.



ಸಾಧ್ಯವಾದಷ್ಟು ಕಾಮಗಾರಿಗಳನ್ನು ಈಗಾಗಲೇ ಒದಗಿಸಲಾಗಿರುವ ಜಮೀನಿನಲ್ಲಿ ಕೈಗೊಳ್ಳಬೇಕು. ಟರ್ಮಿನಲ್ ವಿಸ್ತರಣೆಗೆ ಎಷ್ಟೇ ಜಮೀನು ಅಗತ್ಯವಿದ್ದರೂ ಅದನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಭರವಸೆಯನ್ನು ನೀಡಿದರು.

ಈಗಾಗಲೇ ಸ್ಮಶಾನ ಭೂಮಿಯನ್ನು ಒದಗಿಸಲಾಗಿರುತ್ತದೆ. ಬೆಳಗಾವಿ ವಿಮಾನ ನಿಲ್ದಾಣ ಅಭಿವೃದ್ಧಿಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ಜಮೀನಿನಲ್ಲಿ 14.05 ಎಕರೆ ಜಮೀನು ಏರ್ ಫೋರ್ಸ್ ಸ್ವಾಧೀನದಲ್ಲಿರುವುದರಿಂದ ಪರಸ್ಪರ ಚರ್ಚಿಸಿ ಬಗೆಹರಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣದ ನಿರ್ದೇಶಕರಾದ ತ್ಯಾಗರಾಜನ್ ಅವರು, ರನ್ ವೇ ಮತ್ತು ಟರ್ಮಿನಲ್ ವಿಸ್ತರಣೆಗಾಗಿ ಅಗತ್ಯವಿರುವ ಜಮೀನು ಒದಗಿಸುವುದರ ಜತೆಗೆ ಇನ್ನಿತರ ಸೌಕರ್ಯಗಳನ್ನು ಒದಗಿಸಬೇಕು ಎಂದು ಮನವಿ ಮಾಡಿಕೊಂಡರು.

ಸ್ಥಳೀಯರಿಗೆ ಪರ್ಯಾಯ ರಸ್ತೆ ನಿರ್ಮಾಣ ಮತ್ತಿತರ ಕಾಮಗಾರಿಗಳಿಗೆ ಅನುಮೋದನೆ ಪಡೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ್ ದುಡಗುಂಟಿ, ಭೂದಾಖಲೆಗಳ ಇಲಾಖೆಯ ಉಪನಿರ್ದೇಶಕರಾದ ವಿಜಯಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಕಡ್ಲಾಸ್ಕರ ಬುವಾ ಮೆಮೋರಿಯಲ್ ಟ್ರಸ್ಟ್ ದವರಿಂದ ಸಂಗೀತ ಕಾರ್ಯಕ್ರಮ

# ಸಂಗೀತ ಪರಂಪರೆಯನ್ನು ಕಾಪಾಡಿಕೊಳ್ಳಬೇಕಿದೆ: ಪಿ. ಎಸ್. ಕುಲಕರ್ಣಿ




ಬೆಳಗಾವಿ: ಇಂದಿನ ದಿನಗಳಲ್ಲಿ ಕರೋಕೆ, ಸಿನೀಮಾ ಹಾಡುಗಳ ಹಾವಳಿಗಳಿಂದಾಗ ಶಾಸ್ತ್ರಿಯ ಸಂಗೀತ ಮರೆಯಾಗುತ್ತಿದೆ. ಯುವಕರಲ್ಲಿ ಸಂಗೀತದ ಅಭಿರುಚಿಯನ್ನುಂಟು ಮಾಡುವ. ಸಂಗೀತ ಪರಂಪರೆಯನ್ನು ಕಾಪಾಡಿಕೊಂಡು ಹೋಗಬೇಕಾಗಿದೆ ಎಂದು ಅಖಿಲ ಭಾರತೀಯ ಗಾಂಧರ್ವ ಮಹಾವಿದ್ಯಾಲಯದ ನಿಕಟಪೂರ್ವ ಅಧ್ಯಕ್ಷ ಪಿ.ಎಸ್. ಕುಲಕರ್ಣಿಯವರು ಇಂದಿಲ್ಲಿ ಹೇಳಿದರು.

ನಗರದ ಪಂ. ಬಿ.ವ್ಹಿ. ಕಡ್ಲಾಸ್ಕರಬುವಾ ಮೆಮೋರಿಯಲ್ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ 'ಉದ್ಘಾಟನಾ ಸಮಾರಂಭ ಹಾಗೂ ಸಂಗೀತ ಕಾರ್ಯಕ್ರಮ' ವನ್ನು ಇದೇ ದಿ. 5 ರವಿವಾರದಂದು ಶಹಪೂರದ ಕೋರೆಬೀದಿಯಲ್ಲಿರುವ ಸರಸ್ವತಿ ವಾಚನಾಲಯ ಸಭಾಭವನದಲ್ಲಿ ನೆರವೇರಿತು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕುಲಕರ್ಣಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು. ಮುಂದೆ ಮಾತನಾಡುತ್ತ ಕುಲಕರ್ಣಿಯವರು ಇಂದಿನ ದಿನಗಳಲ್ಲಿ ಸಂಗೀತ ಆಸಕ್ತಿಯನ್ನು ಮೂಡಿಸುತ್ತಿರುವ, ಸಂಗೀತದ ವಾತಾವರನ ನಿರ್ಮಿಸುತ್ತಿರುವ ಕಡ್ಲಾಸ್ಕರ ಬುವಾ ಮೆಮೋರಿಯಲ್ ಟ್ರಸ್ಟ್ ಕಾರ್ಯ ನಿಜಕ್ಕೂ ಶ್ಲಾಘನೀಯವಾದುದು ಎಂದು ಹೇಳಿದರು.

ಪಂ. ರಾಜಪ್ರಭು ಧೋತ್ರೆಯವರು ಮಾತನಾಡಿ ಸಂಗೀತ ಕಲಿಕೆ ಮಹತ್ವವನ್ನು ಮನೆ ಮನೆಗೂ ತಲುಪಿಸಬೇಕಾದ ಕಾರ್ಯವನ್ನು ನಾವು ಮಾಡಬೇಕಾಗಿದೆ. ನಾನು ಮಾಡಬೇಕಾದ ಪಂ. ಬಿ.ವ್ಹಿ. ಕಡ್ಲಾಸ್ಕರಬುವಾ ಮೆಮೋರಿಯಲ್ ಟ್ರಸ್ಟ್ ನ ಕೆಲಸವನ್ನು ಗುರುರಾಜ ಕುಲಕರ್ಣಿಯವರು ಅತ್ಯಂತ ಸಮರ್ಥವಾಗಿ ಮುನ್ನಡಿಸಿಕೊಂಡು ಹೋಗುತ್ತಿದ್ದಾರೆ ಎಂದು ಹೇಳಿದರು.

ಕಲಾವಿದರಾದ ಮುಂಬಯಿಯ ಕುನಾಲ ಭಿಡೆ ಹಾಗೂ ಪುಣೆಯ ಶ್ರೀಮತಿ ವರ್ಷಾ ನೆನೆಯವರಿಂದ ಗಾಯನ ಅಲ್ಲದೇ ಬೆಳಗಾವಿಯ ಸಂಜಯ ದೇಶಪಾಂಡೆಯವರಿಂದ ಸಿತಾರ ವಾದನ ಕಾರ್ಯಕ್ರಮ ನಡೆದವು. ಹಾರ್ಮೋನಿಯಂ ವಾಮನ ವಾಗೂಕರ, ಮುಕುಂದ ಗೋರೆ ಹಾಗೂ ತಬಲಾ ನಾರಾಯಣ ಗಣಾಚಾರಿ, ವೈಭವ ಗಾಡಗೀಳ, ಅಂಗದ ದೇಸಾಯಿ ಸಾಥ ನೀಡಿದರು.

ಪಂ. ಬಿ.ವ್ಹಿ. ಕಡ್ಲಾಸ್ಕರಬುವಾ ಮೆಮೋರಿಯಲ್ ಟ್ರಸ್ಟ್ ಅಧ್ಯಕ್ಷ, ಸಂಗಿತಗಾರ ಗುರುರಾಜ ಕುಲಕರ್ಣಿಯವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯದರ್ಶಿ ವಿಜಯ ಬಾಂದಿವಡೆಕರ ಉಪಸ್ಥಿತರಿದ್ದರು. ಶ್ರೀಮತಿ ನೀರಜಾ ಗಣಾಚಾರಿ ನಿರೂಪಿಸಿದರು.

# ಡಿ. ಬಿ. ಚಂದ್ರೇಗೌಡ ನಿಧನಕ್ಕೆ ಡಾ. ಪ್ರಭಾಕರ ಕೋರೆ ಸಂತಾಪ

ಬೆಳಗಾವಿ: "ಶ್ರೇಷ್ಠ ಸಂಸದೀಯ ಪಟು, ವಿಧಾನಸಭೆ ಮಾಜಿ ಅಧ್ಯಕ್ಷ, ಆತ್ಮೀಯರಾಗಿದ್ದ ಡಿ.ಬಿ.ಚಂದ್ರೇ ಗೌಡ ಅವರ ನಿಧನ ತೀವ್ರ ದುಃಖವನ್ನುಂಟು ಮಾಡಿದೆ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆ ಅವರು ಹೇಳಿದರು.

ರಾಜಕಾರಣದಲ್ಲಿ ಅವರೊಂದಿಗೆ ಹತ್ತಿರದಿಂದ ಸೇವೆ ಸಲ್ಲಿಸಿದ್ದೆ. ನನ್ನ ರಾಜಕೀಯದ ಮಾರ್ಗ ದರ್ಶಕರಾಗಿ, ಹಿತಚಿಂತಕರಾಗಿ, ಆಪ್ತರೆನಿಸಿದ್ದರು. ಅವರ ಆಳವಾದ ರಾಜಕೀಯ ವಿಚಾರಗಳಿಂದ ನಾನು ಸಾಕಷ್ಟು ಪ್ರಭಾವಿತನಾಗಿದ್ದೆ.

ಒಬ್ಬ ಆದರ್ಶ ಮುತ್ಸದ್ದಿ. ಜನಪ್ರತಿನಿಧಿಯಾಗಿದ್ದ ಚಂದ್ರೇಗೌಡರು, ಆಕರ್ಷಿಕ ಮಾತುಗಾರರಾಗಿದ್ದರು.

ಅವರು ನಾಲ್ಕೂ ಸದನಗಳಿಗೂ ಪಾದಾರ್ಪಣೆ ಮಾಡಿದ್ದ ರಾಜ್ಯದ ಅಪರೂಪದ ರಾಜಕಾರಣಿಯೆನಿಸಿದ್ದರು. ಅವರ ಸಮಾಜವಾದಿ ಚಿಂತನೆಗಳು ಪ್ರಖರ ಹಾಗೂ ಪ್ರಬುದ್ಧತೆಯಿಂದ ಕೂಡಿತ್ತು.

ಸಚಿವರಾಗಿ, ವಿಪಕ್ಷ ನಾಯಕರಾಗಿ, ವಿಧಾನ ಸಭಾಧ್ಯಕ್ಷರಾಗಿ ನಿರ್ವಹಿಸಿದ ಕಾರ್ಯ ಅನನ್ಯವೆನಿಸಿದೆ.

ಅವರ ಜನಪರ ಹಾಗೂ ಪ್ರಗತಿಪರವಾದ ವಿಚಾರಗಳು ಇಂದಿನ ಯುವ ರಾಜಕಾರಣಿಗಳಿಗೆ ಮಾದರಿಯೆನಿಸಿದೆ. ಹಿರಿಯ ಜೀವದ ಅಗಲಿಕೆ ದುಃಖತಂದಿದೆ.

ಸಮಾಜಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ. ಭಗವಂತನು ಅವರ ದಿವ್ಯಾತ್ಮಕ್ಕೆಚಿರ ಶಾಂತಿಯನ್ನು ಕರುಣಿಸಲೆಂದು ಭಾಗಪೂರ್ಣ ಶ್ರದ್ಧಾಂಜಲಿ ಸಲ್ಲಸುತ್ತೇನೆ.

## ಮೇತ್ರಿ ಅನೀಲ ಕೃಷ್ಣಾವರೆಗೆ ಪಿಎಚ್.ಡಿ



ಬೆಳಗಾವಿ: ನಗರದ ಮೇತ್ರಿ ಅನೀಲ ಕೃಷ್ಣಾ ಅವರು ಮಂಡಿಸಿದ ಬಾರತೀಯ ಸಂಗೀತ ಕ್ಷೇತ್ರದಲ್ಲಿ ಚರ್ಮವಾದ್ಯಗಳ ಪಾತ್ರ" ಒಂದು ಮಹಾಪ್ರಬಂಧಕ್ಕೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ಪ್ರದಾನ ಮಾಡಿದೆ.

ಸಂಗೀತ ಅಧ್ಯಯನ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾಗಿದ್ದ ಮೇತ್ರಿ ಅವರು, ನಿವೃತ್ತ ಸಹ ಪ್ರಾಧ್ಯಾಪಕರಾದ ಡಾ. ಮೀರಾ ಶಿವಶಂಕರ ಗುಂಡಿ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು.

## ರಾಜ್ಯಾದ್ಯಂತ 4 ದಿನಗಳ ಕಾಲ ಗುಡುಗು ಸಹಿತ ಭಾರಿ ಮಳೆ

ಬೆಂಗಳೂರು: ರಾಜ್ಯಾದ್ಯಂತ 4 ದಿನಗಳ ಕಾಲ ಗುಡುಗು ಸಹಿತ ಭಾರಿ ಮಳೆ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ಕೊಟ್ಟಿದೆ. ಬೆಂಗಳೂರಿನಲ್ಲಿ ಕೂಡ ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ. ಚಿಕ್ಕಮಗಳೂರು, ಉಡುಪಿ, ದಕ್ಷಿಣ ಕನ್ನಡ, ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ ಸೇರಿ ರಾಜ್ಯದ 6 ಜಿಲ್ಲೆಗಳಿಗೆ ಎರಡು ದಿನ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ರಾಜ್ಯದ ಹಲವೆಡೆ ವರುಣರಾಯನ ದರ್ಶನವಾಗಿದೆ. ಕೆಲವೆಡೆ ಅವಘಡಗಳು ಕೂಡ ಸಂಭವಿಸಿವೆ.

# ವಿನಯ ಕುಲಕರ್ಣಿ ಸಚಿವ ಆಗ್ತಾರೆ: ಭವಿಷ್ಯ ನುಡಿದ ಜೈನ ಮುನಿ



ಬೆಳಗಾವಿ: ಲೋಕಸಭಾ ಚುನಾವಣೆ ಬಳಿಕ ವಿನಯ್ ಕುಲಕರ್ಣಿ ಸಚಿವರಾಗುತ್ತಾರೆ ಎಂದು ಹಲಗಾದ ಜೈನ್ ಬಸದಿಯ ಪ.ಪೂ ಬಾಲಾಚಾರ್ಯ ಶ್ರೀ 108 ಸಿದ್ದಸೇನ ಮುನಿ ಮಹಾರಾಜರು ಭವಿಷ್ಯ ನುಡಿದಿದ್ದಾರೆ.

ವಿನಯ್ ಕುಲಕರ್ಣಿ ಅವರು ಬೆಳಗಾವಿ ತಾಲೂಕಿನ ಹಲಗಾ ಗ್ರಾಮದಲ್ಲಿರುವ ಜೈನ್ ಬಸದಿ ಭೇಟಿ ನೀಡಿದ್ದು, ಈ ವೇಳೆ ಜೈನ ಮುನಿ ಸಿದ್ದಸೇನ ಮಹಾರಾಜರು, ನೀವು ಸಚಿವರಾಗುತ್ತೀರಿ, ಧಾರವಾಡ ಜಿಲ್ಲಾ ಉಸ್ತುವಾರಿ ಆಗುತ್ತೀರಿ ಎಂದು ಹೇಳಿ ಆಶೀರ್ವಾದ ಮಾಡಿದ್ದಾರೆ.

ಶಾಸಕ ವಿನಯ್ ಕುಲಕರ್ಣಿಗೆ ಆಶೀರ್ವಾದ ಮಾಡಿದ ಬಳಿಕ ಸಿದ್ದಸೇನ ಮುನಿ ಮಹಾರಾಜರು, ಡಿಕೆ ಶಿವಕುಮಾರ್ ಅವರಿಗೂ ಆಶೀರ್ವಾದ ಕೊಟ್ಟಿದ್ದೇನೆ.

ಅವರೂ ಸಹ ಮುಖ್ಯ ಮಂತ್ರಿಯಾಗುತ್ತಾರೆ ಎಂದು ಹೇಳಿದ್ದಾರೆ. ಮೊದಲೇ ಮುಖ್ಯಮಂತ್ರಿ ಹುದ್ದೆ ಕನಸು ಕಾಣುತ್ತಿದ್ದ ಡಿಕೆ ಶಿವಕುಮಾರ್ಗೆ ಸಿದ್ದಸೇನ ಮುನಿ ಮಹಾರಾಜರು ಆಶೀರ್ವಾದ ಮಾಡಿದ್ದಾರೆ.

# ಪಾಲಿಕೆ ಗೇಟ್ ಮೇಲೆಯೇ ಬಟ್ಟೆ ಒಣ ಹಾಕಿದ ಮಹಿಳೆ



ಹುಬ್ಬಳ್ಳಿ: ವರ್ಷದ ಹಿಂದೆ ಸುವರ್ಣ ವಿಧಾನ ಸೌಧದ ಆವರಣದ ಪ್ರವೇಶದ್ವಾರದ ಮೆಟ್ಟಿಲಿನ ಮೇಲೆ ಶಾವಿಗೆ, ಸಂಡಿಗೆ, ಹಪ್ಪಳ ಒಣ ಹಾಕಿದ್ದ ವಿಡಿಯೋ ಭಾರೀ ಸದ್ದು ಮಾಡಿತ್ತು. ಇದೀಗ ಇದೇ ರೀತಿಯ ಮತ್ತೊಂದು ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.

ಹುಬ್ಬಳ್ಳಿ- ಧಾರವಾಡ ಮಹಾನಗರ ಪಾಲಿಕೆಯ ಗೇಟ್ ಮೇಲೆ ಮಹಿಳೆಯೊಬ್ಬರು ಬಟ್ಟೆಗಳನ್ನು ಒಣಗಿಸಲು ಹಾಕಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಹುಬ್ಬಳ್ಳಿಯ ಪಾಲಿಕೆ ಕಚೇರಿಯ ಎದುರಿರುವ ಪ್ರಮುಖ ಗೇಟ್ ಮೇಲೆ ಅಲೆಮಾರಿ ಮಹಿಳೆಯೊಬ್ಬರು ಬಟ್ಟೆಗಳನ್ನು ಒಗೆದು ಒಣ ಹಾಕಿದ್ದಾರೆ.

ಇದರಿಂದ ಮಹಾನಗರ ಪಾಲಿಕೆ ಸಿಬ್ಬಂದಿ ನಗೆಪಾಟಲಿಗೆ ಗುರಿಯಾಗಿದ್ದಾರೆ. ಪಾಲಿಕೆ ಕಚೇರಿಯ ಎದುರಿಗೆ ಇರುವ ಎಂಟ್ರಿ ಮತ್ತು ಎಕ್ಸಿಟ್ ಗೇಟ್ಗಳಿಗೆ ಬೀಗ ಹಾಕಲಾಗಿದೆ. ಇದನ್ನು ಗಮನಿಸಿದ ಮಹಿಳೆ ಇಲ್ಲಿ ಯಾರು ಬರಲ್ಲವೇನೂ ಎಂದು ಬಟ್ಟೆಗಳನ್ನು ಒಣಗಲು ಹಾಕಿದ್ದಾರೆ. ಅಲೆಮಾರಿ ಕುಟುಂಬಕ್ಕೆ ಸೇರಿದ ಮಹಿಳೆಯ ಈ ಕೆಲಸ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

## ಬೆಳಗಾವಿ ಕೆಎಸ್‌ಆರ್‌ಪಿ 2ನೇ ಪಡೆ ವತಿಯಿಂದ ನಡೆದ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ

# ಪೊಲೀಸರ ದೈಹಿಕ-ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ: ಗಂಗಾಧರ ದಿವತಾರೆ

ಬೆಳಗಾವಿ: ಸಮಾಜದ ನೆಮ್ಮದಿಗಾಗಿ ಹಗಲಿರುಳು ಕೆಲಸ ಮಾಡುವ ಪೊಲೀಸರು ದೈಹಿಕ ಮತ್ತು ಮಾನಸಿಕ ಸದೃಢತೆ ಕಾಯ್ದುಕೊಳ್ಳುವುದು ಅವಶ್ಯವಾಗಿದೆ ಎಂದು ಜಿಪಂ ಬೆಳಗಾವಿಯ ಯೋಜನಾ ಅಧಿಕಾರಿ ಗಂಗಾಧರ ದಿವತಾರೆ ಹೇಳಿದರು.

ಮಚ್ಚೆ ಬಳಿ ಕೆಎಸ್‌ಆರ್ಪಿ 2ನೇ ಪಡೆ ಪೊಲೀಸ್ ಕ್ಯಾಂಪ್ ನಲ್ಲಿ ಬೆಳಗಾವಿಯ ಪಿಟಿಎಸ್ ಕಂಗ್ರಾಳಿ ಸಂಯುಕ್ತ ಆಶ್ರಯದಲ್ಲಿ ನಡೆದ ವಾರ್ಷಿಕ ಕ್ರೀಡಾಕೂಟಕ್ಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡಾಕೂಟ ಪೊಲೀಸ್ ಇಲಾಖೆಯಲ್ಲಿನ ಪ್ರತಿಭೆಗಳನ್ನು ಗುರುತಿಸಿ ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪೋಷಿಸಲು ಕೂಡಾ ಸಹಕಾರಿ ಎಂದು ಹೇಳಿ ಅವರು ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಈ ವೇಳೆ ಕೆಎಸ್‌ಆರ್ ಪಿ 2ನೇ ಪಡೆ ಕಮಾಂಡೆಂಟ್ ರಮೇಶ ಬೊರಗಾವಿ ಅಧ್ಯಕ್ಷತೆ ವಹಿಸಿ ಮಾತನಾಡಿ, ದೈನಂದಿನ ಕೆಲಸ ಕಾರ್ಯಗಳ ಸಂದರ್ಭ ಪೊಲೀಸರು ಹೊಸ ಹೊಸ ಸವಾಲು ಹಾಗೂ ಸಮಸ್ಯೆ ಎದುರಿಸುವುದು ಅನಿವಾರ್ಯವಾಗುತ್ತದೆ. ಅಂಥ ಒತ್ತಡಗಳಿಂದ ಹೊರಬರಲು



ಹಾಗೂ ಮಾನಸಿಕ, ದೈಹಿಕ ಸಾಮರ್ಥ್ಯ ಅಭಿವೃದ್ಧಿಗೆ ಕ್ರೀಡೆಯಲ್ಲಿ ಪಾಲ್ಗೊಳ್ಳುವಿಕೆ ಸಹಾಯ ಮಾಡುತ್ತದೆ ಎಂದು ಸಲಹೆ ನೀಡಿದರು.

ಸಿಬ್ಬಂದಿಗಳು ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಹಬ್ಬವೆಂದು ಪರಿಗಣಿಸಿ, ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕ್ರೀಡೆಯಿಂದ ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ.

ಕ್ರೀಡಾ ಪಟುಗಳು ಸೋಲು ಗೆಲುವುಗಳನ್ನು ಸಮನಾಗಿ ಸ್ವೀಕರಿಸಿ, ಕ್ರೀಡಾ ಮನೋಭಾವನೆ ಮೆರೆಯುವಂತೆ ಮನವಿ ಮಾಡಿದರು.

ಕ್ರೀಡಾಕೂಟಕ್ಕೆ ಚಾಲನೆ ನೀಡಿದ ನಂತರ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆ ಸಿಬ್ಬಂದಿಯು ಆಕರ್ಷಕ ಪಥಸಂಚಲನ ನಡೆಸಿದರು. ಕ್ರೀಡಾಕೂಟದಲ್ಲಿ 100 ಮೀಟರ್ ರನ್ನಿಂಗ್, ಕ್ರಿಕೆಟ್, ವಾಲಿಬಾಲ್, ಹೈ ಜಂಪ್, ಲಾಂಗ್ ಜಂಪ್ ಸೇರಿದಂತೆ ಇನ್ನಿತರ ಕ್ರೀಡೆಗಳಲ್ಲಿ ಪೊಲೀಸ್ ಸಿಬ್ಬಂದಿ ಭಾಗಿಯಾಗಿದ್ದರು.

ಈ ವೇಳೆ ಸಹಾಯಕ ಕಮಾಂಡೆಂಟ್ ಗಳಾದ ಚನ್ನಬಸವ, ಶ್ರೀ ನಾಗೇಶ ಯಡಾಳ, ಆಶಿಶ್ ಮೇಘನ್ನವರ್ ಹಾಗೂ ಆರ್ ಪಿ ಐಗಳಾದ ಪಾಂಡು, ಸುರೇಶ್ ಲಕ್ಕಣ್ಣವರ್, ಮಹೇಶ್, ಶ್ರೀಮಂತ, ಬಸಪ್ಪ , ದಯಾನಂದ, ಸಂತೋಷ, ಜ್ಯೋತಿ ಹಾಗೂ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಜರಿದ್ದರು.

ಸಂಪುಟ: 4 ಸಂಚಿಕೆ: 234 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089